ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೮೦

**ಪಟ್ಟಿ – ೦೩**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತೆಂಟನೆಯ ಅಧಿವೇಶನ**

**ಬುಧವಾರ, ದಿನಾಂಕ : ೧೭ನೇ ಜುಲೈ, ೨೦೧೯.**

---

**ಸಮೂಹ – III**

೧. ಕಂದಾಯ ಸಚಿವರು.

೨. ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

೩. ಮುಜರಾಯಿ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.

೪. ಕಾರ್ಮಿಕ ಸಚಿವರು.

೫. ಅರಣ್ಯ ಸಚಿವರು.

೬. ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

---

## ಸರ್ಕಾರಿ ಐ.ಟಿ.ಐ. ಕಾಲೇಜುಗಳ ಸಂಖ್ಯೆ, ಮೂಲಭೂತ ಸೌಕರ್ಯಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ ):–**

೨೦೬ (೩೨೧) ಮಾನ್ಯ ಮುಜರಾಯಿ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಾರಂಭಿಸಲಾದ ಸರ್ಕಾರಿ ಐ.ಟಿ.ಐ. ಕಾಲೇಜುಗಳ ಸಂಖ್ಯೆ ಎಷ್ಟು ; ಅದರಲ್ಲಿ ಸರ್ಕಾರಿ ಕಟ್ಟಡಗಳನ್ನು ಹೊಂದಿರುವ ಐ.ಟಿ.ಐ. ಕಾಲೇಜುಗಳ ಸಂಖ್ಯೆ ಎಷ್ಟು ; ಸ್ವಂತ ಕಟ್ಟಡವಿಲ್ಲದೆ ನಡೆಯುತ್ತಿರುವ ಕಾಲೇಜುಗಳ ಸಂಖ್ಯೆ ಎಷ್ಟು; ಒದಗಿಸಲಾದ ಮೂಲಭೂತ ಸೌಕರ್ಯಗಳ ಪಟ್ಟಿ ನೀಡುವುದು;

(ಆ) ಪ್ರಸ್ತುತ ಹೊಸದಾಗಿ ಎಷ್ಟು ಸರ್ಕಾರಿ ಐ.ಟಿ.ಐ. ಕಾಲೇಜುಗಳನ್ನು ಪ್ರಾರಂಭಿಸಲು ನಿರ್ಧರಿಸಲಾಗಿದೆ; ಇವುಗಳನ್ನು ಸ್ವಂತ ಕಟ್ಟಡದಲ್ಲಿ ಪ್ರಾರಂಭಿಸಲು ಇಚ್ಛಿಸಲಾಗಿದೆಯೇ;

(ಇ) ವಿಜಯಪುರ, ಬಾಗಲಕೋಟೆ, ಬೆಳಗಾವಿ ಜಿಲ್ಲೆಗಳಲ್ಲಿ ಇರುವ ಸರ್ಕಾರಿ ಐ.ಟಿ.ಐ. ಕಾಲೇಜುಗಳ ವಿಭಾಗವಾರು ವಿದ್ಯಾರ್ಥಿಗಳ ಸಂಖ್ಯೆ, ಬೋಧಕ/ತರಬೇತಿದಾರರು ಸಂಖ್ಯೆ, ಖಾಲಿ ಹುದ್ದೆಗಳ ಸಂಖ್ಯೆ, ತಾತ್ಕಾಲಿಕ ಸಿಬ್ಬಂದಿಗಳ ಸಂಖ್ಯೆ, ಅಲ್ಲಿರುವ ಮೂಲಭೂತ ಸೌಕರ್ಯಗಳು ಹಾಗೂ ಅಗತ್ಯ ಮೂಲಭೂತ ಸೌಕರ್ಯಗಳ ಕೋರಿಕೆಯ ಮಾಹಿತಿಗಳ ಸಂಪೂರ್ಣ ವಿವರ ನೀಡುವುದು?

## ಪೋಡಿ ಮಾಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೭ (೩೭೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ವೆ ನಂ. ೧೬/ಪಿ, ಕಣ್ಣೂರು, ಬಿದರಹಳ್ಳಿ ಹೋಬಳಿ, ಕೆ.ಆರ್.ಪುರಂ ತಾಲ್ಲೂಕು, ಬೆಂಗಳೂರು ಪೂರ್ವ ಈ ಜಮೀನನ್ನು ಪೋಡಿ ಮಾಡಲು ಕೋರಿ ಜಮೀನಿನ ಮಾಲೀಕರು ೨೦೧೨ ರಲ್ಲಿ ಅರ್ಜಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಸರ್ಕಾರ ಪೋಡಿ ದುರಸ್ಥಿ ಮಾಡಲು ಕೈಗೊಂಡ ಕ್ರಮಗಳೇನು; (ಸಂಪೂರ್ಣ ದಾಖಲೆಗಳೊಂದಿಗೆ ಮಾಹಿತಿ ನೀಡುವುದು)

(ಇ) ಮಾನ್ಯ ಉಚ್ಚನ್ಯಾಯಾಲಯವು (WP 26191/2013) ೧೦ ಜುಲೈ ೨೦೧೩ ರಂದು ಸದರಿ ಜಮೀನಿನ ಪೋಡಿ ಮಾಡಲು ಆದೇಶ ಮಾಡಿದ್ದು ಈವರೆವಿಗೂ ಪೋಡಿ ಮಾಡದೇ ಮಾನ್ಯ ಉಚ್ಚ ನ್ಯಾಯಾಲಯದ ಆದೇಶವನ್ನು ಉಲ್ಲಂಘನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು; (ಈವರೆವಿಗೂ ನಡೆದಿರುವ ಪತ್ರ ವಿನಿಮಯ ಮತ್ತು ಇಲಾಖೆಯ ಆದೇಶದ ಸಂಪೂರ್ಣ ಮಾಹಿತಿ ನೀಡುವುದು)

(ಉ) ಪೋಡಿ ಮಾಡಿದ್ದಲ್ಲಿ, ಸಂಪೂರ್ಣ ಮಾಹಿತಿಯನ್ನು ದಾಖಲೆಗಳೊಂದಿಗೆ ನೀಡುವುದು?

## ಬರಪೀಡಿತ ಪ್ರದೇಶಗಳೆಂದು ಘೋಷಿಸಲಾದ ತಾಲ್ಲೂಕುಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೮ (೩೭೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯–೨೦ನೇ ಸಾಲಿನ ಹಿಂಗಾರು ಹಂಗಾಮಿಗೆ ರಾಜ್ಯದ ಎಷ್ಟು ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದೆ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಆ) ಘೋಷಣೆ ಮಾಡಿರುವ ಬರ ಪೀಡಿತ ತಾಲ್ಲೂಕುಗಳಿಗೆ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬರ ಪೀಡಿತ ತಾಲ್ಲೂಕುಗಳಲ್ಲಿ ಬಿಡುಗಡೆ ಮಾಡಿದ ಅನುದಾನದಲ್ಲಿ ಕೈಗೊಂಡಿರುವ ಕಾರ್ಯಕ್ರಮಗಳಾವುದು ಹಾಗೆಯೇ ತುಮಕೂರು ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಿಗೆ ಎಷ್ಟು ಅನುದಾನವನ್ನು ಬಿಡುಗಡೆ ಮಾಡಿದೆ; (ವಿವರ ಒದಗಿಸುವುದು)

(ಈ) ಜಾನುವಾರುಗಳಿಗೆ ಮೇವು ನೀರಿನ ವ್ಯವಸ್ಥೆ ಮಾಡಲು ಮಂಡ್ಯ ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕುಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ ಹಾಗೂ ಅಲ್ಲಿ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ಸರ್ಕಾರಿ ಜಮೀನುಗಳ ಅತಿಕ್ರಮಣದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೦೯ (೩೭೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಇರುವ ಗೋಮಾಳ, ಗೋಕಟ್ಟೆ ಹಾಗೂ ಇತರೆ ಸರ್ಕಾರಿ ಜಮೀನುಗಳ ಸಂಖ್ಯೆ ಎಷ್ಟು; (ಸಂಪೂರ್ಣ

ವಿವರಗಳನ್ನು ಸರ್ವೆ ನಂ. ಸಹಿತ ಹೋಬಳಿವಾರು ಸೂಕ್ತ ದಾಖಲೆಗಳೊಂದಿಗೆ ನೀಡುವುದು)

(ಆ) ಈ ಗೋಮಾಳ, ಗೋಕಟ್ಟೆ ಹಾಗೂ ಇನ್ನಿತರೆ ಸರ್ಕಾರಿ ಜಮೀನುಗಳನ್ನು ಅತಿಕ್ರಮಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಎಷ್ಟು ಪ್ರಕರಣಗಳನ್ನು ಗುರುತಿಸಲಾಗಿದೆ; (ಪ್ರಕರಣವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಅತಿಕ್ರಮಣ ಮಾಡಿರುವ ಪ್ರಕರಣಗಳನ್ನು ನಿಯಮಾನುಸಾರ ಸಕ್ರಮಗೊಳಿಸಲಾಗಿದೆಯೇ; ಹಾಗಿದ್ದಲ್ಲಿ, ಸಕ್ರಮಗೊಳಿಸಿರುವ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಸಕ್ರಮವಾಗದೇ ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಬಾಕಿ ಉಳಿಯಲು ಕಾರಣಗಳೇನು? (ವಿವರ ನೀಡುವುದು)

## ಇಲಾಖೆ ವತಿಯಿಂದ ನಿರುದ್ಯೋಗಿಗಳಿಗೆ ತರಬೇತಿ ನೀಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೦ (೩೭೪) ಮಾನ್ಯ ಮುಜರಾಯಿ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ವ್ಯಾಪ್ತಿಯ ನಗರ ಮತ್ತು ಗ್ರಾಮೀಣ ಭಾಗದಲ್ಲಿರುವ ವಿದ್ಯಾವಂತ ನಿರುದ್ಯೋಗಿ ಯುವಕ–ಯುವತಿಯರಿಗೆ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯಕ್ಕೆ ಸಂಬಂಧಿಸಿದಂತೆ ಇರುವ ಯೋಜನೆಗಳಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯಕ್ಕೆ ಸಂಬಂಧಿಸಿದಂತೆ ಕಳೆದ ಮೂರು ವರ್ಷಗಳಲ್ಲಿ ಸದರಿ ಕ್ಷೇತ್ರಕ್ಕೆ ಬಿಡುಗಡೆಗೊಳಿಸಿದ ಅನುದಾನವೆಷ್ಟು; (ಮಂಡ್ಯ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯ ವ್ಯಾಪ್ತಿಯ ನಗರ ಮತ್ತು ಗ್ರಾಮೀಣ ಭಾಗದಲ್ಲಿರುವ ವಿದ್ಯಾವಂತ ನಿರುದ್ಯೋಗಿ ಯುವಕ–ಯುವತಿಯರು ವಿವಿಧ ಯೋಜನೆಗಳಿಗೆ ಸಂಬಂಧಿಸಿದಂತೆ ಎಷ್ಟು ಮಂದಿ ಅರ್ಜಿ ಸಲ್ಲಿಸಿರುತ್ತಾರೆ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಯೋಜನೆಗಳಿಗೆ ಅರ್ಜಿ ಸಲ್ಲಿಸಿದವರಿಗೆ ತರಬೇತಿ ನೀಡದೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; ವಿಳಂಬವಾಗಲು ಕಾರಣಗಳೇನು? (ವಿವರ ನೀಡುವುದು)

## ಪಹಣಿ ಪತ್ರಿಕೆಗಳಲ್ಲಿರುವ ಸಮಸ್ಯೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೧ (ಇ೭೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ರೈತರ ಜಮೀನುಗಳ ಪಹಣಿ ಪತ್ರಿಕೆಗಳಲ್ಲಿ ಹಳೆಯ ಹಾಗೂ ಹೊಸ ಸರ್ವೆ ನಂಬರ್‌ಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ವೆ ಇಲಾಖೆಯ ಆಕಾರ ಬಂದ್ ವಿಸ್ತೀರ್ಣಕ್ಕೂ ಪಹಣಿ ಪ್ರಕ್ರಿಯೆಯಲ್ಲಿನ ವಿಸ್ತೀರ್ಣಕ್ಕೂ ವ್ಯತ್ಯಾಸವಿರುವುದು ನಿಜವೇ;

(ಇ) ರೈತರ ಜಮೀನುಗಳ ವರ್ಗಾವಣೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಈ ಸಮಸ್ಯೆಯನ್ನು ಯಾವಾಗ ಪರಿಹರಿಸಲಾಗುವುದು? (ವಿವರ ನೀಡುವುದು)

## ರಾಯಚೂರಿನಲ್ಲಿ ಇರುವ ಮಹಾತ್ಮಗಾಂಧಿ ಕ್ರೀಡಾಂಗಣದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೨ (೩೧೩) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರಿನಲ್ಲಿ ನಿರ್ಮಿಸಿರುವ ಮಹಾತ್ಮಗಾಂಧಿ ಕ್ರೀಡಾಂಗಣದ ಕಾಮಗಾರಿಯು ಪೂರ್ತಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಸದರಿ ಕಾಮಗಾರಿಗೆ ಖರ್ಚಾಗಿರುವ ಅನುದಾನ ಎಷ್ಟು;

(ಆ) ಮಹಾತ್ಮಗಾಂಧಿ ಕ್ರೀಡಾಂಗಣದ ಕಾಮಗಾರಿಗೆ ಸರ್ಕಾರದಿಂದ ನೀಡಿರುವ ಅನುದಾನ ಎಷ್ಟು ಹಾಗೂ ಹೆಚ್.ಕೆ.ಆರ್.ಡಿ.ಬಿ. ವತಿಯಿಂದ ನೀಡಿರುವ ಅನುದಾನ ಎಷ್ಟು?

## ನೂತನ ತಾಲ್ಲೂಕುಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೩ (೩೧೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ನೂತನವಾಗಿ ಘೋಷಣೆಯಾಗಿರುವ ಸಿರವಾರ ಹಾಗೂ ಮಸ್ಕಿ ತಾಲ್ಲೂಕುಗಳಲ್ಲಿ ಪೂರ್ಣ ಪ್ರಮಾಣದ ಕಾರ್ಯನಿರ್ವಹಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಯಚೂರಿನಲ್ಲಿ ನೂತನ ಜಿಲ್ಲಾಧಿಕಾರಿಗಳ ಭವನದ ನಿರ್ಮಾಣಕ್ಕೆ ಸರ್ಕಾರ ನೀಡಿರುವ ಅನುದಾನ ಎಷ್ಟು; ಸದರಿ ಭವನದ ನಿರ್ಮಾಣಕ್ಕೆ ತಗಲುವ ವೆಚ್ಚ ಎಷ್ಟು;

(ಇ) ರಾಯಚೂರು ಇಲ್ಲಿ ಈದ್ಗಾ ಮೈದಾನ ನಿರ್ಮಾಣಕ್ಕೆ ಸರ್ಕಾರಿ ಭೂಮಿ ಮಂಜೂರಾತಿ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ಮಾನ್ವಿ ಪಟ್ಟಣದಲ್ಲಿ ಮಿನಿ ವಿಧಾನಸೌಧ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಯಚೂರಿನಲ್ಲಿ ಇರುವ ಅರಣ್ಯ ಪ್ರದೇಶಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೪ (೩೧೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರಿನಲ್ಲಿ ಇರುವ ಅರಣ್ಯ ಪ್ರದೇಶವನ್ನು ಅಭಿವೃದ್ಧಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು;

(ಆ) ಮಾನ್ವಿ ಪಟ್ಟಣದಲ್ಲಿ "ಟ್ರೀಪಾರ್ಕ್" ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಜ್ಯದಲ್ಲಿರುವ ಕ್ರೀಡಾ ವಿದ್ಯಾರ್ಥಿನಿಲಯಗಳ ಕುರಿತು

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೫ (೩೯೩) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಕ್ರೀಡಾ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿರುವ ಕ್ರೀಡಾ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ;

(ಆ) ಅದರಲ್ಲಿ ಪುರುಷರಿಗೆ ಮತ್ತು ಮಹಿಳೆಯರಿಗಿರುವ ವಿದ್ಯಾರ್ಥಿ ನಿಲಯಗಳೆಷ್ಟು ;

(ಇ) ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕ್ರೀಡೆಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಕ್ರೀಡಾ ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸಲು ಸರ್ಕಾರ ಕೈಗೊಳ್ಳುವುದೇ?

## ಅಂಗನವಾಡಿ ಶಿಕ್ಷಕರಿಗೆ ಮೇಲ್ವಿಚಾರಕರಾಗಿ ಬಡ್ತಿ ನೀಡುವ ಬಗ್ಗೆ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೬ (೩೯೨) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಲ್ಲಿ ಅಂಗನವಾಡಿ ಶಿಕ್ಷಕರಿಗೆ ಮೇಲ್ವಿಚಾರಕರಾಗಿ (Supervisor) ಬಡ್ತಿ ನೀಡಲಾಗುತ್ತಿದೆಯೇ; ನೀಡುತ್ತಿದ್ದಲ್ಲಿ, ಅದಕ್ಕೆ ಯಾವ ಕ್ರಮಗಳನ್ನು ಅನುಸರಿಸಲಾಗುತ್ತಿದೆ ;

(ಆ) ಮೇಲ್ವಿಚಾರಕರ ಹುದ್ದೆಗಳನ್ನು ಬಡ್ತಿ ಅಲ್ಲದೆ ನೇರ ನೇಮಕಾತಿಗಳ ಮೂಲಕವೂ ತುಂಬಲಾಗುತ್ತದೆಯೇ; ಅದಕ್ಕಿರುವ ಅರ್ಹತೆಗಳೇನು;

(ಇ) ನೇರ ನೇಮಕಾತಿಗಳನ್ನು ಕೆ.ಪಿ.ಎಸ್.ಸಿ. ಮೂಲಕ ಅರ್ಜಿ ಕರೆದು ಆಯ್ಕೆ ಮಾಡಲಾಗುವುದೇ ? (ವಿವರಗಳನ್ನು ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿರುವ ಅಂಗನವಾಡಿಗಳ ಮಾಹಿತಿ ಕುರಿತು

**ಶ್ರೀ ಕೆ.ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೭ (೩೯೦) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿ–ಸುತ್ತಿರುವ ಒಟ್ಟು ಅಂಗನವಾಡಿಗಳ ಸಂಖ್ಯೆ ಎಷ್ಟು;

(ಆ) ಇವುಗಳಲ್ಲಿ ಸರ್ಕಾರಿ ಮತ್ತು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು;

(ಇ) ಗರಿಷ್ಠ ಹಾಗೂ ಕನಿಷ್ಠ ಮಕ್ಕಳಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು; ಅವು ಯಾವುವು? (ವಿವರ ನೀಡುವುದು)

## ಚಿತ್ರದುರ್ಗ ಜಿಲ್ಲೆಯಲ್ಲಿರುವ ಅಂಗನವಾಡಿಗಳ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೧೮ (೩೭) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಜಿಲ್ಲೆಯಲ್ಲಿ ಇರುವ ಅಂಗನವಾಡಿಗಳ ಸಂಖ್ಯೆ ಎಷ್ಟು; ಸ್ವಂತ ಕಟ್ಟಡಗಳನ್ನು ಹೊಂದಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು ;

(ಆ) ೨೦೧೮–೧೯ನೇ ಸಾಲಿನಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿ ಎಷ್ಟು ಅಂಗನವಾಡಿ ಕಟ್ಟಡಗಳಿಗೆ ಅನುದಾನ ನೀಡಲಾಗಿದೆ; ಇವುಗಳಲ್ಲಿ ಪೂರ್ಣಗೊಂಡಿರುವ ಅಂಗನವಾಡಿಗಳ ಕಟ್ಟಡಗಳ ಸಂಖ್ಯೆ ಎಷ್ಟು?

## ಬಾಲ ಮತ್ತು ಹದಿಹರೆಯದವರ ಕಾರ್ಮಿಕ ನಿಷೇಧ ಕಾಯ್ದೆಯಲ್ಲಿ ಕೃಷಿ ಕ್ಷೇತ್ರವನ್ನು ಅಪಾಯಕಾರಿ ಕ್ಷೇತ್ರವೆಂದು ಪರಿಗಣಿಸದಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೯ (೧೮೦) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಮಕ್ಕಳು ಕೃಷಿ ಕ್ಷೇತ್ರದಲ್ಲಿ ಮತ್ತು ಅದಕ್ಕೆ ಸಂಬಂಧಪಟ್ಟ ಕ್ಷೇತ್ರಗಳಾದ ಬೀಜ ಸಂಸ್ಕರಣೆ, ಹೂ ಸಂಸ್ಕರಣೆ ಕ್ಷೇತ್ರಗಳಲ್ಲಿ ದುಡಿಯುತ್ತಿದ್ದಾರೆ ;

(ಆ) ಈ ಕ್ಷೇತ್ರಗಳಲ್ಲಿ ಬಳಸುವ ಕ್ರಿಮಿನಾಶಕ ಮತ್ತು ಕೀಟಾನಾಶಕ ಔಷಧಗಳು ಮಕ್ಕಳ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಕೃಷಿ ಸಂಬಂಧಿತವಾದ ಕೋಳಿಸಾಕಾಣಿಕೆ, ಹಂದಿ ಸಾಕಾಣಿಕೆ, ಕುರಿ ಸಾಕಾಣಿಕೆ ಮೊದಲಾದವುಗಳಲ್ಲಿರುವ ಮಕ್ಕಳನ್ನು ದುಡಿಮೆಯಿಂದ ಬಿಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಈ) ಹಾಗಿದ್ದಲ್ಲಿ, ಈ ಮಕ್ಕಳ ಹಿತವನ್ನು ರಕ್ಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

12

## ಬೆಳಗಾವಿ ಜಿಲ್ಲೆಯಲ್ಲಿ ಸರ್ವೇಯರ್‌ಗಳ ಅಭಾವದಿಂದ ಕೆಲಸ–ಕಾರ್ಯಗಳ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨೦ (೧೭೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯನ್ನು ಪೋಡಿ ಮುಕ್ತವೆಂದು ಘೋಷಿಸುವುದು ಹಾಗೂ ಸರ್ವೇಯರ್‌ಗಳ ಅಭಾವದಿಂದ ಕೆಲಸ–ಕಾರ್ಯಗಳು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೆಳಗಾವಿ ಜಿಲ್ಲೆಯಲ್ಲಿ ಯಾವ ಯಾವ ವಿಧಾನಸಭಾ ಕ್ಷೇತ್ರಗಳಲ್ಲಿ ಯಾವ ಯಾವ ಗ್ರಾಮಗಳನ್ನು ಪೋಡಿ ಮುಕ್ತ ಗ್ರಾಮಗಳನ್ನಾಗಿ ಆಯ್ಕೆ ಮಾಡಲಾಗಿದೆ; (ವಿವರ ನೀಡುವುದು)

(ಇ) ಬೆಳಗಾವಿ ಜಿಲ್ಲೆಯಲ್ಲಿ ಮಂಜೂರಾಗಿರುವ ಸರ್ಕಾರಿ ಸರ್ವೇಯರು–ಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳು ಎಷ್ಟು; ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು; (ತಾಲ್ಲೂಕುವಾರು ವಿವರ ನೀಡುವುದು)

(ಈ) ಜಿಲ್ಲೆಯಲ್ಲಿಯ ಸರ್ವೇಯರ್‌ಗಳು ರೈತರಿಗೆ ಭೂಮಿ ಪೋಡಿ ಮಾಡಿಸಿಕೊಳ್ಳುತ್ತಿರುವ ಜಮೀನುದಾರರಿಗೂ ಅನಾವಶ್ಯಕವಾಗಿ ತೊಂದರೆ ನೀಡುತ್ತಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು;

(ಉ) ಇಂತಹ ಅಧಿಕಾರಿಗಳ ಸರ್ವೇಯರುಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಚೈಲ್ಡ್‌ಲೈನ್ ೧೦೯೮ ಸೇವೆಯು ಜಾರಿಯಲ್ಲಿರುವ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨೧ (೧೭೯) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಚೈಲ್ಡ್‌ಲೈನ್ ೧೦೯೮ ಸೇವೆ ಜಾರಿಯಲ್ಲಿದೆ; (ವಿವರ ನೀಡುವುದು)

(ಆ) ಇದನ್ನು ಎಲ್ಲಾ ಜಿಲ್ಲೆಗಳಲ್ಲಿ ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಎಲ್ಲಾ ಜಿಲ್ಲೆಗಳಲ್ಲೂ ಚೈಲ್ಡ್‌ಲೈನ್ ಜಿಲ್ಲಾ ಸಲಹಾ ಮಂಡಳಿ ಅಸ್ತಿತ್ವದಲ್ಲಿದೆಯೇ; ಇದ್ದಲ್ಲಿ ಅವುಗಳ ಕಾರ್ಯಗಳೇನು; (ವಿವರ ನೀಡುವುದು)

(ಈ) ಚೈಲ್ಡ್‌ಲೈನ್ ೧೦೯೮ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಾರ್ಯಕ್ಕೂ ಇರುವ ಸಂಬಂಧಗಳೇನು? (ವಿವರ ನೀಡುವುದು)

## ೨೦೧೨ರಲ್ಲಿ ಸಮಗ್ರ ಮಕ್ಕಳ ಅಭಿವೃದ್ಧಿ ಯೋಜನೆ ಜಾರಿ ಮಾಡುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨೨ (೧೭೮) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರವು ೨೦೧೨ರಲ್ಲಿ ಸಮಗ್ರ ಮಕ್ಕಳ ಅಭಿವೃದ್ಧಿ ಯೋಜನೆ (Restructured ICDS) ಜಾರಿ ಮಾಡಿದ್ದು ನಮ್ಮ ರಾಜ್ಯದಲ್ಲಿ ಈ ಯೋಜನೆಯ ಅಳವಡಿಕೆಯ ಬಗ್ಗೆ ಸರ್ಕಾರದ ನಿಲುವೇನು;

(ಆ) ರಾಜ್ಯದಲ್ಲಿ ಪುನರ್ ಸಂಘಟಿತ ಮಾದರಿಯಲ್ಲಿ ಸಮಗ್ರ ಶಿಶು ಅಭಿವೃದ್ಧಿ ಯೋಜನೆ ಜಾರಿಯಲ್ಲಿದೆಯೇ;

(ಇ) ಈ ಪುನರ್ ಸಂಘಟಿತ ಯೋಜನೆ ಮಾದರಿ ಜಾರಿಯಲ್ಲಿ ಅಂಗನವಾಡಿ ಕಾರ್ಯಕರ್ತೆಯರನ್ನು ಬಾಲವಿಕಾಸ ಸಮಿತಿಯಲ್ಲಿ (BVS) ಯಾವ ರೀತಿಯಲ್ಲಿ ತೊಡಗಿಸಿಕೊಳ್ಳಲಾಗಿದೆ;

(ಈ) ಈ ಯೋಜನೆಯ ಜಾರಿಯಿಂದ ಏನು ಪರಿಣಾಮವಾಗಿದೆ ಮತ್ತು ಅದರ ಫಲಿತಾಂಶವೇನು ?

## ರಾಜ್ಯಕ್ಕೆ ವಲಸೆ ಬರುತ್ತಿರುವವರ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೨೩ (೧೮೧) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಕ್ಕೆ ಪ್ರತಿ ವರ್ಷ ಎಷ್ಟು ಮಕ್ಕಳು ತಮ್ಮ ಕುಟುಂಬದ ಜೊತೆ ವಲಸೆ ಬರುತ್ತಿದ್ದಾರೆ;

(ಆ) ವಲಸೆ ಕುಟುಂಬಗಳ ಮಕ್ಕಳ ಪ್ರಾಥಮಿಕ ಪೂರ್ವ ಶಿಕ್ಷಣ, ಅಭಿವೃದ್ಧಿ, ಆರೋಗ್ಯ, ರಕ್ಷಣೆ, ಶಾಲಾ ಶಿಕ್ಷಣ ಇವೇ

ಮೊದಲಾದವುಗಳ ಕುರಿತು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ಮತ್ತು ಯೋಜನೆಗಳೇನು; (ವಿವರ ನೀಡುವುದು)

(ಇ) ರಾಜ್ಯದ ಪ್ರತಿಯೊಂದು ಜಿಲ್ಲೆಯಲ್ಲಿಯೂ ವಲಸೆ ಮಕ್ಕಳ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ಕ್ರೀಡಾ ವಸತಿ ಶಾಲೆಗಳ ಬಗ್ಗೆ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೨೨೪ (೩೮೨) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಕ್ರೀಡಾ ವಸತಿ ಶಾಲೆಗಳ ಸಂಖ್ಯೆ ಹಾಗೂ ಅಲ್ಲಿನ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ವಸತಿ ಶಾಲೆಗಳಲ್ಲಿ ಖಾಲಿ ಇರುವ ತರಬೇತುದಾರರ ಹುದ್ದೆಗಳ ಸಂಖ್ಯೆ ಎಷ್ಟು; (ಶಾಲಾವಾರು/ ವರ್ಗವಾರು ವಿವರ ನೀಡುವುದು) ಸದರಿ ಹುದ್ದೆಗಳು ಯಾವ ದಿನಾಂಕದಿಂದ ಖಾಲಿಯಿರುತ್ತವೆ;

(ಇ) ಸದರಿ ಶಾಲೆಗಳಲ್ಲಿ ಅತಿಥಿ / ಗುತ್ತಿಗೆ ತರಬೇತುದಾರರನ್ನು ನೇಮಿಸಿಕೊಂಡಿದ್ದಲ್ಲಿ ಅವರ ಒಟ್ಟು ಸಂಖ್ಯೆ ಎಷ್ಟು; (ಶಾಲಾವಾರು ವಿವರ ನೀಡುವುದು)

(ಈ) ಅತಿಥಿ/ಗುತ್ತಿಗೆ ತರಬೇತುದಾರರಿಗೆ (ಶಿಕ್ಷಕರಿಗೆ) ಮಾಹೆಯಾನ (ತಲಾ) ನೀಡುತ್ತಿರುವ ಗೌರವ ಸಂಭಾವನೆಯ ಮೊತ್ತವೆಷ್ಟು;

(ಉ) ಸದರಿ ಗೌರವ ಸಂಭಾವನೆಯನ್ನು ಯಾವ ದಿನಾಂಕದಿಂದ ಜಾರಿಗೆ ತರಲಾಗಿದೆ?

## ಮುಜರಾಯಿ ದೇವಾಲಯಗಳ ಖಾಯಂ ನೌಕರರಿಗೆ ೬ನೇ ವೇತನ ಆಯೋಗದ ಪರಿಷ್ಕೃತ ಶ್ರೇಣಿ ಮಂಜೂರಾತಿ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೨೨೫ (೩೮೩) ಮಾನ್ಯ ಮುಜರಾಯಿ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮುಜರಾಯಿ ದೇವಾಲಯಗಳಲ್ಲಿ ಸರ್ಕಾರಿ ವೇತನ ಶ್ರೇಣಿ ಪಡೆದು ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಖಾಯಂ ನೌಕರರಿಗೆ ೬ನೇ ವೇತನ ಆಯೋಗದ ಪರಿಷ್ಕೃತ ವೇತನ ಶ್ರೇಣಿಯನ್ನು ಇದುವರೆವಿಗೂ ಮಂಜೂರು ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಮಂಜೂರು ಮಾಡದೆ ವಿಳಂಬ ಮಾಡಲು ಕಾರಣಗಳೇನು ; (ವಿವರ ನೀಡುವುದು)

(ಇ) ಯಾವ ಕಾಲಮಿತಿಯಲ್ಲಿ ಮಂಜೂರು ಮಾಡಲಾಗುವುದು ?

## ಅರಣ್ಯ ಇಲಾಖೆ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೬ (೩೯೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಕೆಲವೆಡೆ ಅರಣ್ಯ ವ್ಯಾಪ್ತಿಯಲ್ಲಿ ವಾಸಿಸುವ ನಿವಾಸಿಗಳು ತಮ್ಮ ಸ್ವಾರ್ಥಕ್ಕಾಗಿ, ವೈಯುಕ್ತಿಕ ದ್ವೇಷ, ಜಾಗದ ವೈಷಮ್ಯಕ್ಕಾಗಿ ಬೆಂಕಿ ಹಚ್ಚುತ್ತಿರುವ ಕೆಲವು ಘಟನೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಅರಣ್ಯ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಕೆಲವು ಅಗ್ನಿಶಾಮಕ ಠಾಣೆಗಳಲ್ಲಿ ಸಿಬ್ಬಂದಿ ಕೊರತೆಯನ್ನು ಎದುರಿಸುತ್ತಿದ್ದು, ಇದನ್ನು ಸರಿದೂಗಿಸಲು ಕೆಲವೆಡೆ ಹೋವಮ್ ಗಾರ್ಡ್‌ಗಳನ್ನು ನಿಯೋಜಿಸಲಾಗಿದೆಯೇ; ಈ ಹೋಮ್ ಗಾರ್ಡ್ ಸಿಬ್ಬಂದಿಗಳು ಅರಣ್ಯದಲ್ಲಿ ಬೆಂಕಿ ನಂದಿಸುವ ಪರಿಣಿತಿ ತರಬೇತಿಯನ್ನು ಹೊಂದಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸಿಬ್ಬಂದಿ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಕಳೆದ ಫೆಬ್ರವರಿಯಲ್ಲಿ ಬಂಡೀಪುರ ಹುಲಿ ಸಂರಕ್ಷಿತಾರಣ್ಯದಲ್ಲಿ ಬೆಂಕಿ ಕಾಣಿಸಿಕೊಂಡು ಕಾಡ್ಗಿಚ್ಚಿನಂತೆ ಹರಡಿ ಸುಮಾರು ೨೦೦೦೦ ಕ್ಕೂ ಹೆಚ್ಚು ಎಕರೆ ಅರಣ್ಯ ಪ್ರದೇಶ ಬೆಂಕಿಗಾಹುತಿಯಾಗಿದ್ದು, ಈ ದುರಂತಗಳನ್ನು ತಪ್ಪಿಸಲು ಅರಣ್ಯ ಇಲಾಖೆಯ ಸಿಬ್ಬಂದಿಯ ಸಾಂಪ್ರದಾಯಿಕ ಬೆಂಕಿ ನಂದಿಸುವ ವಿಧಾನದಿಂದ ಹೊಸ ವೈಜ್ಞಾನಿಕ ವಿಧಾನಗಳನ್ನು ಅಳವಡಿಸಿಕೊಳ್ಳಲು ಸರ್ಕಾರವು ಚಿಂತಿಸಿದೆಯೇ; ಹಾಗಿದ್ದಲ್ಲಿ, ಯಾವ ಯಾವ ಯೋಜನೆಗಳನ್ನು ರೂಪಿಸುತ್ತಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಟಿಂಬರ್ ಮಾಫಿಯಾದವರು ರಾತ್ರಿ ಹೊತ್ತು ಚೆಕ್ ಪೋಸ್ಟ್‌ನಲ್ಲಿರುವ ಪೊಲೀಸರಿಗೆ ಮತ್ತು ಅರಣ್ಯ ಅಧಿಕಾರಿಗಳು ಮತ್ತು ಅರಣ್ಯ ಸಿಬ್ಬಂದಿ ಅಕ್ರಮಗಳಿಗೆ ಕೈ ಜೋಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಟಿಂಬರ್ ಮಾಫಿಯಾವನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶಾಲೆಯಿಂದ ಹೊರಗುಳಿದ ಬಾಲ ಕಾರ್ಮಿಕ ಮಕ್ಕಳ ಶಾಲೆಯ ಕಡೆ ನನ್ನ ನಡೆ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೭ (೩೯೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಶಾಲೆಯಿಂದ ಹೊರಗುಳಿದ ಎಲ್ಲಾ ಮಕ್ಕಳನ್ನು (ವಿಶೇಷವಾಗಿ ಬಾಲ ಕಾರ್ಮಿಕ ಮಕ್ಕಳು) ಪುನಃ ಮುಖ್ಯ ಶಾಲಾವಾಹಿನಿಗೆ ಕರೆತರಲು **"ಶಾಲೆಯ ಕಡೆ ನನ್ನ ನಡೆ"** ಎಂಬ ವಿಶೇಷ ಅಭಿಯಾನವನ್ನು ಪ್ರಾರಂಭಿಸಿದ್ದು, ಇದಕ್ಕೆ ಇಲಾಖೆಯಿಂದ ನಿರೀಕ್ಷಿತ ಬೆಂಬಲ ದೊರೆಯದೆ ವಿಫಲಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಈ ವಿಶೇಷ ಅಭಿಯಾನದ ಮೂಲಕ ಇಲ್ಲಿಯವರೆಗೆ ಎಷ್ಟು ಜನ ಬಾಲ ಕಾರ್ಮಿಕರನ್ನು ಮರಳಿ ಶಾಲಾ ಮುಖ್ಯವಾಹಿನಿಗೆ ಕರೆತರಲಾಗಿದೆ? (ಜಿಲ್ಲಾವಾರು ವಿವರ ನೀಡುವುದು)

## ಭೂ ಸಾಗುವಳಿ ಸೌಕರ್ಯಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೨೨೮ (೩೭೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದಾದ್ಯಂತ ಖುಷ್ಕಿ ಮತ್ತು ನೀರಾವರಿ ಭೂ ಸಾಗುವಳಿ ಮಾಡುತ್ತಿರುವ ಎಲ್ಲಾ ರೈತಾಪಿ ವರ್ಗದವರ ಭೂಮಿಗಳಿಗೆ ಸರ್ವೆ ನಂಬರ್, ಎಂ.ಆರ್. ನಂಬರ್ ಹಾಗೂ ಖಾತಾ ನಂಬರ್‌ಗಳನ್ನು ಒದಗಿಸಲಾಗಿದೆಯೇ; (ವಿವರ ಒದಗಿಸುವುದು)

(ಆ) ಹಾಗಿದ್ದಲ್ಲಿ, ಸುಮಾರು ವರ್ಷಗಳಿಂದ ಖುಷ್ಕಿ ಮತ್ತು ನೀರಾವರಿ ಜಮೀನುಗಳು ರೈತರ ಒಡೆತನದಲ್ಲೇ ಇದ್ದು, ಈ ಜಮೀನುಗಳನ್ನು ಭೂ ಸಾಗುವಳಿ ಮಾಡುತ್ತಿರುವ ಸಾವಿರಾರು ಎಕರೆ ಜಮೀನುಗಳಿಗೆ ೯೯೯ ಎಂದು ಸಾಮೂಹಿಕವಾಗಿ ಸರ್ವೆ ನಂಬರನ್ನು ಯಾವ ಕಾರಣಕ್ಕಾಗಿ ನಿಗದಿ ಮಾಡಲಾಗಿದೆ ; (ವಿವರ ಒದಗಿಸುವುದು)

(ಇ) ಹಾಗಿದ್ದಲ್ಲಿ, ರೈತರುಗಳ ಜಮೀನಿಗೆ ಸಾಮೂಹಿಕವಾಗಿ ೯೯೯ ಸರ್ವೆ ನಂಬರ್ ನೀಡಿರುವುದನ್ನು ಯಾವಾಗ ರದ್ದುಪಡಿಸಲಾಗುವುದು ಮತ್ತು ಕಾನೂನಿನ ಅನ್ವಯ ಸದರಿ ರೈತರ ಜಮೀನುಗಳಿಗೆ ಸರ್ವೆನಂಬರ್, ಎಂ.ಆರ್ ನಂಬರ್ ಹಾಗೂ ಖಾತೆಗಳನ್ನೊಳಗೊಂಡಂತೆ ಸರ್ಕಾರಿ ಸೌಲಭ್ಯಗಳನ್ನು ಒದಗಿಸಲಾಗುವುದು? (ಮಾಹಿತಿ ಒದಗಿಸುವುದು)

## ಉದ್ಯೋಗ ಸೌಲಭ್ಯ ಕಲ್ಪಿಸಿಕೊಡುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೨೭೯ (೩೭೮) ಮಾನ್ಯ ಮುಜರಾಯಿ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ಇಲ್ಲಿಯುವರೆಗೆ ಎಷ್ಟು ಮಂದಿ ನಿರುದ್ಯೋಗಿಗಳನ್ನು ಗುರುತಿಸಲಾಗಿದೆ ; (ವಿವರ ಒದಗಿಸುವುದು)

(ಆ) ಅವರುಗಳಲ್ಲಿ ಈವರೆಗೆ ಉದ್ಯೋಗ ಸೌಲಭ್ಯ ಕಲ್ಪಸಿಕೊಟ್ಟಿರುವವರ ಸಂಯೆ ಎಷ್ಟು ; (ವಿವರ ಒದಗಿಸುವುದು)

(ಇ) ಗುರುತಿಸಲ್ಪಟ್ಟ ನಿರುದ್ಯೋಗಿಗಳಿಗೆ ಯಾವ ಕಾರಣಕ್ಕಾಗಿ ಉದ್ಯೋಗ ಸೌಲಭ್ಯ ಕಲ್ಪಿಸಿಕೊಟ್ಟಿರುವುದಿಲ್ಲ, ಮತ್ತು ಇವರುಗಳಿಗೆ ಯಾವಾಗ ಉದ್ಯೋಗ ಸೌಲಭ್ಯವನ್ನು ಕಲ್ಪಸಿಕೊಡಲಾಗುವುದು(ವಿವರ ಒದಗಿಸುವುದು)

## ವಿಕಲಚೇತನರಿಗೆ ತ್ರಿಚಕ್ರ ವಾಹನ ಒದಗಿಸುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೨೩೦ (೩೭೭) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲಿಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲೆಯಾದ್ಯಂತ ಕಳೆದ ೨ ವರ್ಷದಿಂದ ಎಷ್ಟು ಸಂಖ್ಯೆಯ ವಿಕಲಚೇತನರನ್ನು ಗುರುತಿಸಲಾಗಿದೆ ;

(ಆ) ಇಲ್ಲಿಯವರೆಗೆ ಗುರುತಿಸಿರುವ ವಿಕಲಚೇತನ ಫಲಾನುಭವಿಗಳ ಪೈಕಿ ಎಷ್ಟು ವಿಕಲಚೇತನ ಫಲಾನುಭವಿಗಳಿಗೆ ತ್ರಿಚಕ್ರ ವಾಹನಗಳನ್ನು ವಿತರಿಸಲಾಗಿದೆ; (ಮಾಹಿತಿ ಒದಗಿಸುವುದು)

(ಇ) ವಿತರಿಸಲಾಗದೆ ಇರುವ ವಿಕಲಚೇತನ ಫಲಾನುಭವಿಗಳ ಸಂಖ್ಯೆಯ ವಿವರ ಒದಗಿಸುವುದು; ಮತ್ತು ಇವರುಗಳಿಗೆ ಯಾವಾಗ ತ್ರಿಚಕ್ರ ವಾಹನಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು.

## ಅಂಗನವಾಡಿ ಕೇಂದ್ರಗಳ ಮಾಹಿತಿ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೨೩೧ (೩೭೯) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲೆಯಾದ್ಯಂತ ಇರುವ ಅಂಗನವಾಡಿ ಕೇಂದ್ರಗಳ ಒಟ್ಟು ಮಾಹಿತಿ ಒದಗಿಸುವುದು ;

(ಆ) ಸದರಿ ಅಂಗನವಾಡಿ ಕೇಂದ್ರಗಳಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳು ಸರ್ಕಾರಿ ಕಟ್ಟಡಗಳನ್ನು ಹೊಂದಿವೆ ; (ಮಾಹಿತಿ ಒದಗಿಸುವುದು)

(ಇ) ಸರ್ಕಾರಿ ಕಟ್ಟಡ ಹೊಂದದೆ, ಬಾಡಿಗೆ ಕಟ್ಟಡ ಆಧಾರದ ಮೇಲೆ ನಡೆಸುತ್ತಿರುವ ಅಂಗನವಾಡಿಗಳ ವಿವರ ಒದಗಿಸುವುದು ;

(ಈ) ಬಾಡಿಗೆ ಕಟ್ಟಡಗಳಲ್ಲಿ ನಡೆಸುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಯಾವಾಗ ಸರ್ಕಾರಿ ಕಟ್ಟಡಗಳನ್ನು ಒದಗಿಸಲಾಗುವುದು; (ವಿವರ ಒದಗಿಸುವುದು)

## ಅಂಬೇಡ್ಕರ್ ಕ್ರೀಡಾಂಗಣವನ್ನು ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೨೩೨ (೩೭೫) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲೆಯ ಜಿಲ್ಲಾ ಕೇಂದ್ರದಲ್ಲಿರುವ ಡಾ॥ ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣವನ್ನು ಅಭಿವೃದ್ಧಿಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಸದರಿ ಕ್ರೀಡಾಂಗಣದ ಅಭಿವೃದ್ಧಿ ಕಾಮಗಾರಿಗಾಗಿ ಬಿಡುಗಡೆಯಾಗಿರುವ ಅನುದಾನದ ವಿವರ ಒದಗಿಸುವುದು ;

(ಇ) ಸದರಿ ಕ್ರೀಡಾಂಗಣದ ಅಭಿವೃದ್ಧಿ ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗುವುದು? (ಮಾಹಿತಿ ಒದಗಿಸುವುದು)

## ಅಂತ್ಯ ಸಂಸ್ಕಾರ ಪರಿಹಾರ ಭತ್ಯೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೩ (೧೭೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿ.ಪಿ.ಎಲ್ ಕುಟುಂಬದವರಿಗೆ ಸರ್ಕಾರದಿಂದ ನೀಡಲಾಗುವ ಅಂತ್ಯ ಸಂಸ್ಕಾರ ಪರಿಹಾರ ಭತ್ಯೆಯನ್ನು ನೀಡಲು ಇರುವ ಕಾಲಮಿತಿಯೇನು ;

(ಆ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಂತ್ಯ ಸಂಸ್ಕಾರ ಪರಿಹಾರ ಭತ್ಯೆ ಕೋರಿ ಸಲ್ಲಿಸಿರುವ ಅರ್ಜಿಗಳಲ್ಲಿ ನವೆಂಬರ್–೨೦೧೫ನೇ ಇಸವಿಯಿಂದೀಚೆಗೆ ಸಲ್ಲಿಸಿರುವ ಅರ್ಜಿದಾರರಿಗೆ ಅಂತ್ಯ ಸಂಸ್ಕಾರ ಪರಿಹಾರ ಭತ್ಯೆ ದೊರಕದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಅರ್ಜಿಗಳು ಬಾಕಿ ಉಳಿಯಲು ಕಾರಣಗಳೇನು ;

(ಇ) ಬಾಕಿ ಇರುವ ಅರ್ಜಿಗಳಿಗೆ ಪರಿಹಾರ ದೊರಕಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು)

## ನೀರಿನ ಹಕ್ಕು ಪತ್ರ ನೀಡುವ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೩೪ (೧೭೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ಭೂಮಿಯಲ್ಲಿ ನೀರಿನ ಹಕ್ಕು ಪತ್ರವನ್ನು ಹಾಗೂ ಗ್ರಾಮಠಾಣಾ ಜಾಗಗಳಿಗೆ ನೀರಿನ ಹಕ್ಕು ಪತ್ರವನ್ನು ನೀಡುವವರ್‍ಯಾರು ;

(ಆ) ಗ್ರಾಮ ಪಂಚಾಯಿತಿಗಳೇ ಅಥವಾ ಕಂದಾಯ ಇಲಾಖೆಯೇ; (ವಿವರ ನೀಡುವುದು)

(ಇ) ನೀರಿನ ಹಕ್ಕು ಪತ್ರ ನೀಡುವ ಬಗ್ಗೆ ಇಲ್ಲಿಯವರೆಗೂ ನೀಡಿದ ಸರ್ಕಾರದ ಆದೇಶಗಳೇನು; (ಪ್ರತಿಗಳನ್ನು ಒದಗಿಸುವುದು)

(ಈ) ನೀರಿನ ಹಕ್ಕು ಪತ್ರ ನೀಡುವ ವಿಚಾರದಲ್ಲಿ ಸರ್ಕಾರದ ಸ್ಪಷ್ಟ ಆದೇಶವೇನು ?

## ಆಪ್ತ ಸಹಾಯಕರ ವೇತನದ ಕುರಿತು

**ಶ್ರೀ ಪ್ರಾಣೇಶ್. ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೨೩೫ (೧೭೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಜಿಲ್ಲಾಧಿಕಾರಿಗಳ ಕಛೇರಿಯ ಮೂಲಕ ವಿಧಾನ ಸಭೆ ಮತ್ತು ವಿಧಾನ ಪರಿಷತ್ ಸದಸ್ಯರುಗಳ ಆಪ್ತ ಸಹಾಯಕರಾಗಿ

ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುವರ ಸಂಖ್ಯೆ ಎಷ್ಟು; ಯಾವ ಯಾವ ವಿಧಾನ ಸಭಾ ಸದಸ್ಯರುಗಳ, ವಿಧಾನ ಪರಿಷತ್ ಸದಸ್ಯರುಗಳ ಹಾಗೂ ಸಚಿವರುಗಳ ಮತ್ತು ಕ್ಯಾಬಿನೆಟ್ ದರ್ಜೆ ಹೊಂದಿರುವವರ ಬಳಿ ಕಾರ್ಯನಿರ್ವಹಿಸುತ್ತಿರುವವರ ವಿವರ ನೀಡುವುದು ;

(ಆ) ಜಿಲ್ಲಾಧಿಕಾರಿಗಳ ಕಛೇರಿಯ ಮೂಲಕ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುವ ಆಪ್ತ ಸಹಾಯಕರಿಗೆ ಎಷ್ಟು ತಿಂಗಳಿಂದ ವೇತನ ನೀಡಿರುವುದಿಲ್ಲ ಹಾಗೂ ಕಾರಣವೇನು ; (ಜಿಲ್ಲಾವಾರು ವಿವರ ನೀಡುವುದು)

(ಇ) ಜಿಲ್ಲಾಧಿಕಾರಿಗಳ ಕಛೇರಿಯಿಂದ ಯಾವ ಯಾವ ಲೆಕ್ಕ ಶೀರ್ಷಿಕೆಯಡಿ ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಆಪ್ತ ಸಹಾಯಕರಿಗೆ ವೇತನ ನೀಡಲು ಸರ್ಕಾರ ಆದೇಶ ಮಾಡಿದೆ ; ಆದೇಶದ ಪ್ರತಿಗಳನ್ನು ನೀಡಿ ಯಾವ ಯಾವ ಜಿಲ್ಲಾಧಿಕಾರಿಗಳ ಕಛೇರಿಗೆ ಇಲ್ಲಿಯವರೆಗೂ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಆಪ್ತ ಸಹಾಯಕರಿಗೆ ಇಲ್ಲಿಯವರೆಗೆ ವೇತನ ನೀಡಿಲ್ಲವೇಕೆ ; ಬೆಂಗಳೂರು ಜಿಲ್ಲಾಧಿಕಾರಿಗಳಿಗೆ ಮಾತ್ರ ಹಣ ಬಿಡುಗಡೆ ಮಾಡಿ ಇತರ ಜಿಲ್ಲಾಧಿಕಾರಿಗಳಿಗೆ ಹಣ ಬಿಡುಗಡೆ ಮಾಡಿಲ್ಲದಿರುವುದೇಕೆ? (ಸಂಪೂರ್ಣ ವಿವರ ನೀಡುವುದು)

## ಚಿಕ್ಕಮಗಳೂರು ಜಿಲ್ಲೆಗೆ ಬಿಡುಗಡೆಯಾದ ಅನುದಾನ ಬಗ್ಗೆ

**ಶ್ರೀ ಪ್ರಾಣೇಶ್. ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೨೩೬ (೧೭೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭, ೨೦೧೭–೧೮ ಹಾಗೂ ೨೦೧೮–೧೯ನೇ ಸಾಲುಗಳಲ್ಲಿ ಚಿಕ್ಕಮಗಳೂರು ಜಿಲ್ಲೆಗೆ ಅರಣ್ಯ ಇಲಾಖೆಯ ವತಿಯಿಂದ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನ ಎಷ್ಟು ; ಯಾವ ಯಾವ ವಲಯಗಳಿಗೆ ಎಷ್ಟು ಹಣ ಬಿಡುಗಡೆಯಾಗಿದೆ; (ಸಂಪೂರ್ಣ ವಿವರ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಕಾಮಗಾರಿ ಕೈಗೊಳ್ಳಲು ಇರುವ ಮಾನದಂಡವೇನು; (ಸಂಪೂರ್ಣ ವಿವರ ನೀಡುವುದು)

(ಇ) ಕಾಮಗಾರಿ ಕೈಗೊಂಡ ಏಜೆನ್ಸಿಗಳು ಯಾವುವು ; ಯಾವ ಯಾವ ಏಜೆನ್ಸಿಗಳಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಉಪ ನೋಂದಣಾಧಿಕಾರಿ ಕಛೇರಿಗಳಿಗೆ ಅಂಗವಿಕಲರು ಹೋಗಲು ತೊಂದರೆಯಾಗುತ್ತಿರುವ ಬಗ್ಗೆ.

**ಶ್ರೀ ಪ್ರಾಣೇಶ್. ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೭ (೩೩೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರಿ ಉಪ ನೋಂದಣಾಧಿಕಾರಿಗಳ ಕಛೇರಿಗಳು ಖಾಸಗಿ ಕಟ್ಟಡದಲ್ಲಿ ಬಾಡಿಗೆ ಆಧಾರ ಮೇಲೆ ಕಾರ್ಯನಿರ್ವಹಿಸುತ್ತಿದ್ದು ಈ ಕಛೇರಿಗಳಿಗೆ "ಅಂಗವಿಕಲ ಬಂಧುಗಳರ" ಕೆಲಸ ಕಾರ್ಯಗಳಿಗೆ ಹೋಗಿ ಬರಲು ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಎಷ್ಟು ಕಛೇರಿಗಳನ್ನು ಗುರುತಿಸಲಾಗಿದೆ ;

(ಇ) ಅಂಗವಿಕಲರು ಹೋಗಿ ಬರಲು ಅನಾನುಕೂಲತೆ ಇರದ ಬಾಡಿಗೆ ಕಟ್ಟಡಗಳನ್ನು ಗುರುತಿಸಿ ಬಾಡಿಗೆ ನವೀಕರಣ ಮಾಡದೇ ಬೇರೆ ಕಟ್ಟಡಗಳಿಗೆ ಸ್ಥಳಾಂತರ ಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ?

## ಕುಸ್ತಿಪಟುಗಳಿಗೆ ಹಾಲಿ ನೀಡುತ್ತಿರುವ ಮಾಸಾಶನದ ಬಗ್ಗೆ

**ಶ್ರೀ ಆರ್.ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೮ (೩೮೦) ಮಾನ್ಯ ಯುವಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಜಿಲ್ಲೆ ಮತ್ತು ದಾವಣಗೆರೆ ಜಿಲ್ಲೆಯ ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳಲ್ಲಿ ನುರಿತ ಕುಸ್ತಿಪಟುಗಳಿದ್ದು, ಅವರುಗಳಿಗೆ ಹಾಲಿ ನೀಡುತ್ತಿರುವ ಮಾಸಾಶನ ಎಷ್ಟು ; (ವಿವರ ನೀಡುವುದು)

(ಆ) ಹಾಲಿ ನೀಡುತ್ತಿರುವ ಮಾಸಾಶನ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

(ಇ) ಕುಸ್ತಿಪಟುಗಳಿಗೆ ಎಷ್ಟು ಪ್ರಮಾಣದಲ್ಲಿ ಭತ್ಯೆಯನ್ನು ಹೆಚ್ಚಿಸಲಾಗುವುದು?

## ರಾಜ್ಯದಲ್ಲಿ ಬರಪೀಡಿತ ಪ್ರದೇಶಗಳಿಗೆ ಬಿಡುಗಡೆಯಾಗಿರುವ ಅನುದಾನದ ಬಗ್ಗೆ

**ಶ್ರೀ ಹೆಚ್.ಎಂ.ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫ (೧೮೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯ನೇ ಸಾಲಿಗೆ ರಾಜ್ಯದ ಎಷ್ಟು ತಾಲ್ಲೂಕುಗಳನ್ನು ಸರ್ಕಾರ ಬರಪೀಡಿತ ಪ್ರದೇಶಗಳೆಂದು ಘೋಷಣೆ ಮಾಡಿದೆ;

(ಆ) ಬರಪೀಡಿತ ಪ್ರದೇಶಗಳಿಗೆ ರಾಜ್ಯ ಸರ್ಕಾರದಿಂದ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕೇಂದ್ರ ಸರ್ಕಾರದಿಂದ ರಾಜ್ಯದ ಬರಪೀಡಿತ ಪ್ರದೇಶಗಳಿಗೆ ಅನುದಾನ ಬಿಡುಗಡೆಯಾಗಿದೆಯೇ ? (ಮಾಹಿತಿ ನೀಡುವುದು)

## ಸರ್ವೆಗಾಗಿ ಸಲ್ಲಿಕೆಯಾಗಿರುವ ಅರ್ಜಿಗಳು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೦ (೩೮೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ಭೂ ಮಾಪನ ಇಲಾಖೆಯಲ್ಲಿ ರೈತರು ತಮ್ಮ ಕೃಷಿ ಭೂಮಿಯ ಸರ್ವೆಗಾಗಿ ಪ್ರಸಕ್ತ ಸಾಲಿನಲ್ಲಿ ಸಲ್ಲಿಸಲಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಇದುವರೆವಿಗೂ ಎಷ್ಟು ರೈತರ ಜಮೀನುಗಳನ್ನು ಭೂಮಾಪನ ಮಾಡಿದೆ ; ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿ ಇರಲು ಕಾರಣಗಳೇನು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಬೀದರ್ ಜಿಲ್ಲೆಯ ತಾಲ್ಲೂಕಿನಲ್ಲಿ ಕೃಷಿ ಭೂಮಿಯ ಸರ್ವೆಗಾಗಿ ಪ್ರಸಕ್ತ ಸಾಲಿನಲ್ಲಿ ಸಲ್ಲಿಸಲಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಭೂಮಾಪನ ಇಲಾಖೆಯು ಈವರೆಗೂ ಎಷ್ಟು ರೈತರ ಜಮೀನುಗಳನ್ನು ಭೂಮಾಪನ ಮಾಡದೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿಯಿರಲು ಕಾರಣಗಳೇನು ? (ಮಾಹಿತಿ ನೀಡುವುದು)

## ಹೊಸದಾಗಿ ರಚನೆಯಾಗಿರುವ ತಾಲ್ಲೂಕುಗಳಲ್ಲಿ ಕಛೇರಿಗಳು ಪ್ರಾರಂಭಿಸದೆ ಇರುವುದು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೧ (೩೮೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯುಲ್ಲಿ ಹೊಸದಾಗಿ ರಚನೆಗೊಂಡಿರುವ ತಾಲ್ಲೂಕುಗಳಲ್ಲಿ ಕಛೇರಿಗಳು ಪೂರ್ಣ ಪ್ರಮಾಣದಲ್ಲಿ ಪ್ರಾರಂಭಗೊಂಡಿದೆಯೇ ; (ವಿವರ ನೀಡುವುದು)

(ಆ) ಪ್ರತ್ಯೇಕ ತಾಲ್ಲೂಕು ಪಂಚಾಯತ್ ಮತ್ತು ಕೆ.ಡಿ.ಪಿ. ಸಭೆಯನ್ನು ನಡೆಸಲು ಆದೇಶ ಮಾಡಲಾಗಿದೆಯೇ ; (ವಿವರ ನೀಡುವುದು)

(ಇ) ಆದೇಶ ಹೊರಡಿಸದಿದ್ದಲ್ಲಿ ಯಾವ ಕಾಲಮಿತಿಯಲ್ಲಿ ಆದೇಶ ಹೊರಡಿಸಲಾಗುವುದು ; (ವಿವರ ನೀಡುವುದು)

(ಈ) ಈ ಹೊಸ ತಾಲ್ಲೂಕಿಗೆ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಮಾಡದೇ ಇರುವಲ್ಲಿ ಕಾರಣಗಳೇನು ? (ವಿವರ ನೀಡುವುದು)

## ಟ್ರೀಪಾರ್ಕ್ ನಿರ್ಮಾಣ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೨ (೩೮೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಪ್ರತಿ ತಾಲ್ಲೂಕುವಾರು/ಮತಕ್ಷೇತ್ರವಾರು ಅರಣ್ಯ ಇಲಾಖೆಯಿಂದ ಟ್ರೀಪಾರ್ಕ್ ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರತಿ ಟ್ರೀಪಾರ್ಕ್ ನಿರ್ಮಾಣಕ್ಕಾಗಿ ಸರ್ಕಾರ ನೀಡುತ್ತಿರುವ ಅನುದಾನವೆಷ್ಟು ;

(ಇ) ೨೦೧೮–೧೯ನೇ ಸಾಲಿನಲ್ಲಿ ಒಟ್ಟು ಎಷ್ಟು ಟ್ರೀಪಾರ್ಕ್‌ಗಳನ್ನು ನಿರ್ಮಾಣ ಮಾಡಲು ಅನುದಾನ ಬಿಡುಗಡೆ ಮಾಡಲಾಗಿದೆ ; (ಮಾಹಿತಿ ಒದಗಿಸುವುದು)

(ಈ) ಬೀದರ್ ಜಿಲ್ಲೆಯ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಟ್ರೀಪಾರ್ಕ್ ನಿರ್ಮಾಣವನ್ನು ಯಾವಾಗ ಮಾಡಲಾಗುವುದು ;

(ಉ) ಟ್ರೀಪಾರ್ಕ್ ನಿರ್ಮಾಣ ಮಾಡಲು ಇಲಾಖೆಯಿಂದ ಪ್ರಸ್ತಾವನೆ ಬಂದಿದೆಯೇ ; ಬಂದಿದ್ದಲ್ಲಿ, ಮಂಜೂರಾತಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬೀದರ್ ಜಿಲ್ಲೆಯಲ್ಲಿನ ಕ್ರೀಡಾಂಗಣಗಳ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೩ (೩೮೮) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿರುವ ಜಿಲ್ಲಾ ಹಾಗೂ ತಾಲ್ಲೂಕು ಕ್ರೀಡಾಂಗಣಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ವಿವರ ನೀಡುವುದು)

(ಆ) ಪ್ರಸಕ್ತ ಸಾಲಿನಲ್ಲಿ ಹೊಸದಾಗಿ ಎಷ್ಟು ಜಿಲ್ಲಾ ಹಾಗೂ ತಾಲ್ಲೂಕು ಕ್ರೀಡಾಂಗಣಗಳು ಮಂಜೂರಾಗಿವೆ ; ಅವುಗಳಿಗೆ ಈವರೆಗೆ ನೀಡಲಾಗಿರುವ ಅನುದಾನವೆಷ್ಟು ; (ವಿವರ ನೀಡುವುದು)

(ಇ) ಜಿಲ್ಲೆಯ ಕ್ರೀಡಾಪಟುಗಳಿಗೆ ಅವರವರ ಕ್ರೀಡಾ ಕ್ಷೇತ್ರದಲ್ಲಿ ಬೆಳೆಯಲು ಸರ್ಕಾರ ಕ್ರೀಡಾ ಪಾಲಿಸಿ ಯೋಜನೆಯನ್ನು ಹಾಕಿಕೊಂಡಿದೆಯೇ; (ವಿವರ ನೀಡುವುದು)

(ಈ) ಬೀದರ ತಾಲ್ಲೂಕಿನಲ್ಲಿ ಇದುವರೆಗೂ ತಾಲ್ಲೂಕು ಕ್ರೀಡಾಂಗಣ ಮಂಜೂರು ಮಾಡದಿರಲು ಕಾರಣಗಳೇನು ; ಪ್ರಸಕ್ತ ಸಾಲಿನಲ್ಲಿ ಮಂಜೂರು ಮಾಡಲಾಗುವುದೇ ?

## ಬೆಂಗಳೂರಿನ ಗಾರ್ಮೆಂಟ್ಸ್‌ಗಳಲ್ಲಿ ಕೆಲಸ ಮಾಡುವ ಮಹಿಳೆಯರ ಮೇಲೆ ನಿರಂತರ ಶೋಷಣೆ ಹಾಗೂ ದೂರು ಕುರಿತು

**ಶ್ರೀ ಹೆಚ್.ಎಂ.ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೪ (೩೪೩) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ಗಾರ್ಮೆಂಟ್ಸ್‌ಗಳಲ್ಲಿ ಕೆಲಸ ಮಾಡುವ ಮಹಿಳೆಯರ ಮೇಲೆ ನಿರಂತರ ಶೋಷಣೆ ನಡೆಯುತ್ತಿದೆ ಎನ್ನುವ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಗಾರ್ಮೆಂಟ್ಸ್ ಮಹಿಳೆಯರ ಹಕ್ಕುಗಳ ರಕ್ಷಣೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ರಾಜ್ಯದ ಅಸಂಘಟಿತ ಕಾರ್ಮಿಕರ ಹಿತರಕ್ಷಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಇನ್ನೂ ಬಾಲಕಾರ್ಮಿಕರನ್ನು ನಿಯೋಜಿಸಿ ಕೊಳ್ಳಲಾಗುತ್ತಿದೆ ಎನ್ನುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಾಲಕಾರ್ಮಿಕರನ್ನು ದುಡಿಸಿಕೊಳ್ಳುವರಿಗೆ ಯಾವ ಶಿಕ್ಷೆ ನೀಡಲಾಗುತ್ತಿದೆ ;

(ಈ) ಜಿಲ್ಲಾ ಕೇಂದ್ರಗಳ ಕಾರ್ಮಿಕ ಸಾಮಾಜಿಕ ಭದ್ರತೆಗೆ ಸರ್ಕಾರ ಯಾವ ಯೋಜನೆಗಳನ್ನು ಜಾರಿಗೊಳಿಸಿದೆ ; (ಮಾಹಿತಿ ನೀಡುವುದು)

(ಉ) ಕಾರ್ಮಿಕರ ಭವಿಷ್ಯದ ದೃಷ್ಟಿಯಿಂದ ಈಗ ಇರುವ ಕಾರ್ಮಿಕರ ಕಲ್ಯಾಣ ನಿಧಿ ಯೋಜನೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ?

## ಮಹಿಳೆಯರ ಆರೋಗ್ಯ ಮಕ್ಕಳ ಪೌಷ್ಠಿಕ ಆಹಾರ ಭದ್ರತೆ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೫ (೩೫೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಹಿಳೆಯರ ಆರೋಗ್ಯ, ಮಕ್ಕಳಿಗೆ ಪೌಷ್ಠಿಕ ಆಹಾರ ಭದ್ರತೆಯ ವಿಚಾರದಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಆ) ಪ್ರಸ್ತುತ ರಾಜ್ಯದಲ್ಲಿ ಎಷ್ಟು ಹೊಸ ಅಂಗನವಾಡಿಗಳ ಬೇಡಿಕೆ ಇದೆ ; ಈಗಿರುವ ಅಂಗನವಾಡಿ ಕೇಂದ್ರಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿದೆಯೇ ; (ಮಾಹಿತಿ ನೀಡುವುದು)

(ಇ) ರಾಜ್ಯದ ಬರಪೀಡಿತ ಗ್ರಾಮೀಣ ಪ್ರದೇಶದ ಮಕ್ಕಳ ಅಪೌಷ್ಠಿಕತೆ ಹೋಗಲಾಡಿಸಲು ಸರ್ಕಾರದ ಮುಂದೆ ಯಾವ ಯಾವ ಯೋಜನೆಗಳಿವೆ ; (ವಿವರ ನೀಡುವುದು)

(ಈ) ಕಳೆದೆರಡು ವರ್ಷಗಳಲ್ಲಿ ರಾಜ್ಯದ ವಿಕಲಾಂಗರಿಗೆ ಎಷ್ಟು ತ್ರಿಚಕ್ರ ವಾಹನಗಳನ್ನು ಹಾಗೂ ಇತರ ಪರಿಕರಗಳನ್ನು ವಿತರಿಸಲಾಗಿದೆ ; (ವಿವರ ನೀಡುವುದು)

(ಉ) ಹಿರಿಯ ನಾಗರಿಕರ ಸಬಲೀಕರಣಕ್ಕೆ ಈವರೆಗೆ ಸಕಾರ ವ್ಯಯಿಸಿದ ಹಣವೆಷ್ಟು ; ಯಾವ ಯೋಜನೆಗಳು ಫಲಾನುಭವಿಗಳಿಗೆ ತಲುಪಿವೆ ; ಯಾವ ಯೋಜನೆಗಳು ಇನ್ನೂ ಕಾರ್ಯಗತಗೊಂಡಿಲ್ಲ ? (ವಿವರ ನೀಡುವುದು)

## ರಾಜ್ಯದ ಎಲ್ಲಾ ಕೇಂದ್ರಗಳಲ್ಲಿ ಸಮರ್ಪಕ ಕ್ರೀಡಾ ಉತ್ತೇಜನ ಸಂಸ್ಥೆಗಳನ್ನು ಸ್ಥಾಪಿಸುವ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೬ (೩೪೨) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಕೇಂದ್ರಗಳಲ್ಲಿ ಒಲಂಪಿಕ್ಸ್ ಅಸೋಸಿಯೇಷನ್, ಅಥ್ಲೆಟಿಕ್ ಫೆಡರೇಷನ್‌ನಂತಹ ಸಮರ್ಪಕ ಕ್ರೀಡಾ ಉತ್ತೇಜನ ಸಂಸ್ಥೆಗಳನ್ನು ಸ್ಥಾಪಿಸುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ ;

(ಆ) ಉದಯೋನ್ಮುಖ ಕ್ರೀಡಾಪಟುಗಳನ್ನು ಗುರುತಿಸಿ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ವಾರ್ಷಿಕ ಪ್ರೋತ್ಸಾಹ ಧನ, ಸಹಾಯ ಧನ ನೀಡುವ ಬಗ್ಗೆ ಸರ್ಕಾರದ ನಿಲುವೇನು ; ಯಾವ ಹೊಸ ಯೋಜನೆಗಳನ್ನು ಸರ್ಕಾರ ಹಮ್ಮಿಕೊಂಡಿದೆ ;

(ಇ) ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳ ಕ್ರೀಡಾಂಗಣ ನಿರ್ವಹಣೆಯ ಸದ್ಯದ ಸ್ಥಿತಿಗತಿಗಳೇನು ; ಈವರೆಗೆ ಇದರ ನಿರ್ವಹಣೆಗೆ ವ್ಯಯವಾದ ಒಟ್ಟು ಹಣವೆಷ್ಟು ; (ವಿವರ ನೀಡುವುದು)

(ಈ) ರಾಜ್ಯದ ಬೇರೆ ಬೇರೆ ಭಾಗಗಲ್ಲಿ ಅಥ್ಲೆಟಿಕ್ ತರಬೇತುದಾರರ ಕೊರತೆ ಕಂಡುಬಂದಿದೆಯೇ ; ಕೊರೆತೆಯಿದ್ದಲ್ಲಿ ಮರು ನೇಮಕಾತಿಗೆ ಕ್ರಮ ಕೈಗೊಳ್ಳಲಾಗಿದೆಯೇ ; (ವಿವರ ನೀಡುವುದು)

(ಉ) ರಾಷ್ಟ್ರದಲ್ಲೇ ಪ್ರಸಿದ್ಧಿ ಪಡೆಯುತ್ತಿರುವ ಗ್ರಾಮೀಣ ಕ್ರೀಡೆ ಕಬಡ್ಡಿ ಅಭಿವೃದ್ಧಿಗೆ ಪ್ರತ್ಯೇಕ ಕ್ರೀಡಾ ಕೇಂದ್ರ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಈವರೆಗೆ ಒತ್ತುವರಿಯಾಗಿರುವ ಗೋಮಾಳಗಳ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೭ (೩೪೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಈವರೆಗೆ ಒತ್ತುವರಿಯಾಗಿರುವ ಗೋಮಾಳಗಳ ಸಂಖ್ಯೆ ಎಷ್ಟು ; ಒತ್ತುವರಿಯಾದ ಗೋಮಾಳಗಳನ್ನು

ಹಿಂಪಡೆಯಲಾಗಿದೆಯೇ ; ಒತ್ತುವರಿದಾರರ ವಿರುದ್ಧ ಯಾವ ಕ್ರಮಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ರಾಜ್ಯದ ಬಹುತೇಕ ತಾಲ್ಲೂಕು ಕಛೇರಿಗಳಲ್ಲಿ ರೈತರ ಆರ್.ಟಿ.ಸಿ.ಯಲ್ಲಿ ಬೆಳೆ ನೋಂದಾವಣಿ, ಪಹಣಿ ನೋಂದಾವಣಿ ಮುಂತಾದ ಕೆಲಸಗಳು ಸುಸೂತ್ರವಾಗಿ ಆಗುತ್ತಿಲ್ಲ ಎನ್ನುವ ದೂರುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ತಾಲ್ಲೂಕು ಕಛೇರಿಯ ಭೂಮಿ ಕೇಂದ್ರವನ್ನು ಖಾಸಗಿ ನಿರ್ವಹಣೆಗೆ ಕೊಡಬೇಕೆನ್ನುವ ಆಗ್ರಹ ಕೇಳಿ ಬಂದಿದ್ದು ಈ ಕುರಿತು ಸರ್ಕಾರದ ನಿಲುವೇನು ;

(ಈ) ತಾಲ್ಲೂಕು ಹೋಬಳಿ ಕೇಂದ್ರಗಳ ವ್ಯಾಪ್ತಿಯಲ್ಲಿ ಜಮೀನುಗಳ ಸರ್ವೆ ಕಾರ್ಯ ಸಮರ್ಪಕವಾಗಿ ನಡೆಯುತ್ತಿಲ್ಲ ಎನ್ನುವ ಆರೋಪಗಳು ಕೇಳಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸರ್ವೆ ಅಧಿಕಾರಿಗಳ ನೇಮಕಾತಿ ಪ್ರಕ್ರಿಯೆ ಈಗ ಯಾವ ಹಂತದಲ್ಲಿದೆ ?

## ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೮ (೩೭) ಮಾನ್ಯ ಮುಜರಾಯಿ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರವು ನೂತನವಾಗಿ ಘೋಷಿಸಿರುವ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಕಾರ್ಯ ಸೂಚಿಗಳೇನು ; ಮತ್ತು ಇದರ

ಸ್ವರೂಪವೇನು ; ಜಿಲ್ಲಾ ಮಟ್ಟದಲ್ಲೂ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಘಟಕಗಳನ್ನು ತೆರೆಯಲಾಗುವುದೇ ;

(ಆ) ಬ್ರಾಹ್ಮಣ ಅಭಿವೃದ್ಧಿ ಮಂಡಳಿಯು ಕಾರ್ಯಾರಂಭ ಮಾಡಿದೆಯೇ ; ಆಯವ್ಯಯದಲ್ಲಿ ಘೋಷಣೆಯಾಗಿ ಒಂದು ವರ್ಷ ಕಳೆದರೂ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಕಾರ್ಯಾರಂಭ ಮಾಡದಿರಲು ಕಾರಣವೇನು ;

(ಇ) ಬ್ರಾಹ್ಮಣ ಅಭಿವೃದ್ಧಿ ಮಂಡಳಿಯು ಬ್ರಾಹ್ಮಣ ಸಮಾಜದ ಅಭಿವೃದ್ಧಿಗೆ ಯಾವ ರೀತಿಯಲ್ಲಿ ಸಹಕರಿಸುತ್ತದೆ ?

## ನಕಲಿ ದಾಖಲೆ ಸಲ್ಲಿಸಿ ಭೂಮಾರಾಟ ಮಾಡಿರುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೪೯ (೩೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯ ಗಂಗೇನ ಹಳ್ಳಿಯ ನಂ. ೧ ರಿಂದ ೯೯, ವರ್ತೂರು ಸರ್ವೆ ನಂ ೭ ರಿಂದ ೧೦ ವರ್ತೂರು ನರಸೀಪುರ ಸರ್ವೆ ನಂ ೧ ರಿಂದ ೩೫ ಹಾಗೂ ಪೆದ್ದನ ಪಾಳ್ಯ ಸರ್ವೆ ನಂ ೧೭ ರಿಂದ ೨೦ ಪ್ರಸ್ತುತ ಯಾರ ಹೆಸರಿನಲ್ಲಿದೆ ; ಈ ಜಾಗ ಅವರುಗಳ ಹೆಸರಿಗೆ ವರ್ಗಾವಣೆಯಾಗಿದ್ದು ಯಾವಾಗ ; ಯಾರ ಆದೇಶದ ಮೇಲೆ ಆಗಿದೆ ;

(ಆ) ಸದರಿ ಸರ್ವೆಗಳಿಗೆ ಸಂಬಂಧಿಸಿದ ಕೈ ಬರಹದ ಪಹಣಿ, ಖೇತುವಾರು ಮತ್ತು ಆಕಾರ್ ಬಂದ್, ಮೈಸೂರು ಸೆಟಲ್ ಮೆಂಟ್ ಪ್ರತಿ, ಇನಾಂ ಕುರಿತ ಡಿ ಸಿ ಆದೇಶಗಳಲ್ಲಿ ನಮೂದಿಸಿದಂತೆ ಈ ಜಮೀನಿನ ಮಾಲೀಕರೆಂದು ಯಾವ ಹೆಸರನ್ನು ನಮೂದಿಸಿದೆ ; (ದಾಖಲೆಗಳ ಪ್ರತಿಗಳನ್ನು ಒದಗಿಸುವುದು)

(ಇ) ಸದರಿ ಸರ್ವೆಗಳ ಜಮೀನುಗಳನ್ನು ಮಂಜೂರು ಮಾಡುವಂತೆ ಕೋರಿ ಮನವಿ ಸಲ್ಲಿಸಿದವರು ಯಾರು ? (ಈ ಕುರಿತು ವಿವರ ನೀಡುವುದು)

## ಸರ್ಕಾರಿ ಭೂಮಿ ಒತ್ತುವರಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೦ (೩೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಭೂಮಿ–ಅರಣ್ಯ ಒತ್ತುವರಿಯ ಎಷ್ಟು ಪ್ರಕರಣಗಳು ದಾಖಲಾಗಿವೆ ; ಒಟ್ಟು ಎಷ್ಟು ಸರ್ಕಾರಿ ಭೂಮಿ ಒತ್ತುವರಿಯಾಗಿದೆ ;

(ಆ) ಒತ್ತುವರಿ ತೆರವುಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು ; ಇದುವರೆಗೆ ಎಷ್ಟು ಎಕರೆ ಭೂಮಿ ಒತ್ತುವರಿದಾರರಿಂದ ತೆರವುಗೊಳಿಸಲಾಗಿದೆ ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡ ನೌಕರರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೧ (೩೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಕಳೆದ ೫ ವರ್ಷಗಳಲ್ಲಿ ವಿಲೀನಗೊಂಡ ಸರ್ಕಾರಿ ನೌಕರರ ಸಂಖ್ಯೆ ಎಷ್ಟು ; (ಹೆಸರು ಮತ್ತು ವಿಳಾಸದೊಂದಿಗೆ ಮಾಹಿತಿ ನೀಡುವುದು) ಅವರು

ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಳ್ಳುವ ಸಮಯದಲ್ಲಿ ಅವರ ಮತ್ತು ಕುಟುಂಬದವರ ಹೆಸರಿನಲ್ಲಿರುವ ಸ್ಥಿರಾಸ್ತಿ ಮತ್ತು ಚರಾಸ್ಥಿಯ ಒಟ್ಟು ಮೌಲ್ಯ ಎಷ್ಟು ;

(ಆ) ಪ್ರಸ್ತುತ ವಿಲೀನಗೊಂಡವರ ಹೆಸರಿನಲ್ಲಿ ಮತ್ತು ಅವರ ಅವಲಂಬಿತರ ಹೆಸರಿನಲ್ಲಿ ಇರುವ ಸ್ಥಿರಾಸ್ಥಿ ಮತ್ತು ಚರಾಸ್ಥಿಯ ಒಟ್ಟು ಮೌಲ್ಯ ಎಷ್ಟು ?

## ಮಾರ್ಗಸೂಚಿ ದರಕ್ಕಿಂತ ಕಡಿಮೆ ದರಕ್ಕೆ ನೋಂದಣಿ ಮಾಡಿದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೨ (೩೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಪ್ರಸ್ಟೇಜ್ ಟೆಕ್ ಪಾರ್ಕ್ ೩ ಎಂಬ ಹೆಸರಿನಲ್ಲಿ ವರ್ತೂರು ಹೋಬಳಿಯ ಬೆಳ್ಳಂದೂರು ಖಾನೆ ಗ್ರಾಮದ ಸರ್ವೆ ಸಂಖ್ಯೆಗಳಾದ ೧೧೦/೧, ೧೧೦/೨, ೧೧೦/೩ರಲ್ಲಿ ನಿರ್ಮಿಸಿದ ವಾಣಿಜ್ಯ ಸಂಕೀರ್ಣದ ವಾಣಿಜ್ಯ ಬ್ಲಾಕುಗಳನ್ನು ೧೩೫ ವಿವಿಧ ಗ್ರಾಹಕರುಗಳಿಗೆ ಸರ್ಕಾರವು ನಿಗದಿಪಡಿಸಿದ ಮಾರ್ಗಸೂಚಿ ದರಕ್ಕಿಂತ ಕಡಿಮೆ ದರದಲ್ಲಿ ಮಾರಾಟ ನೋಂದಣಿ ಮಾಡಿರುವ ತಪ್ಪಿತಸ್ಥ ಅಧಿಕಾರಿಯ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;' ಉದ್ದೇಶ ಪೂರ್ವಕವಾಗಿ ಸರ್ಕಾರಕ್ಕೆ ನಷ್ಟ ಉಂಟು ಮಾಡಿರುವ ಅಧಿಕಾರಿಯನ್ನು ಅಮಾನತ್ತುಗೊಳಿಸದಿರಲು ಕಾರಣವೇನು ;

(ಆ) ಉದ್ದೇಶ ಪೂರ್ವಕವಾಗಿ ರೂ. ೧೦೩.೫ ಕೋಟಿ ನಷ್ಟ ಉಂಟು ಮಾಡಿರುವ ಅಧಿಕಾರಿಯಿಂದಲೇ ಸದರಿ ಮೊತ್ತವನ್ನು ವಸೂಲು ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಸರ್ಕಾರವು ನಿಗದಿಪಡಿಸಿದ ಮಾರ್ಗಸೂಚಿ ದರಕ್ಕಿಂತ ಕಡಿಮೆ ದರದಲ್ಲಿ ಮಾರಾಟ ನೋಂದಣಿ ಮಾಡಿರುವುದು ಸಾಭೀತಾಗಿರುವುದರಿಂದ ಈ ನೋಂದಣಿಯನ್ನು ರದ್ದುಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಸಂಬಂಧಿತ ಕಂಪನಿಯವರು ಕೊರತೆ ಶುಲ್ಕನವನ್ನು ಪಾವತಿಸಲು ಹೊರಡಿಸಿರುವ ಆದೇಶದ ವಿರುದ್ಧ ಮಾತ್ರವೇ ಅಫೀಲು ಮಾಡಿ ತಡೆಯಾಜ್ಞೆ ಪಡೆದುಕೊಂಡಿರುವುದರಿಂದ ಈ ಅಫೀಲು ಇತ್ಯರ್ಥವಾಗುವವರೆಗೆ ಮಾರಾಟ ನೋಂದಣಿಯನ್ನು ಅಮಾನತ್ತಿನಲ್ಲಿಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ಮತ್ತು ಸದರಿ ಕಟ್ಟಡಗಳಿಗೆ ನೀರಿನ ಸಂಪರ್ಕ ಮತ್ತು ವಿದ್ಯುತ್ ಸಂಪರ್ಕ ಕಡಿತಗೊಳಿಸಲು ಕ್ರಮ ಕೈಗೊಳ್ಳಲಾಗಿದೆಯೇ ?

## ಕ್ರೀಡಾ ತರಬೇತಿ ಮತ್ತು ಯೋಜನೆಗಳು

**ಶ್ರೀ ಎಸ್. ರುದ್ರೇಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೩ (೧೮೨) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರದ ಆಶ್ರಯದಲ್ಲಿ ಎಲ್ಲೆಲ್ಲಿ ಕ್ರೀಡಾ ತರಬೇತಿ ಮತ್ತು ಕ್ರೀಡಾ ಚಟುವಟಿಕೆಗಳನ್ನು ಆಯೋಜಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ನೋಂದಾಯಿತ ಸಂಸ್ಥೆಗಳಿಗೆ ಇಲಾಖೆಯಿಂದ ಎಷ್ಟು ಅನುದಾನ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಗ್ರಾಮ ಮಟ್ಟದಲ್ಲಿ ಯುವಕರನ್ನು ಕ್ರೀಡೆಗೆ ಪ್ರೇರೇಪಿಸಲು ಕೈಗೊಂಡ ಯೋಜನೆಗಳು ಯಾವುವು ?

## ಸಂಧ್ಯಾ, ಸುರಕ್ಷಾ ಮತ್ತು ವಿಧವಾ ವೇತನ ಯೋಜನೆ

**ಶ್ರೀ ಎಸ್. ರುದ್ರೇಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೪ (೧೮೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೇ ೨೦೧೮ ರಿಂದ ಜೂನ್ ೨೦೧೯ ಅಂತ್ಯಕ್ಕೆ ರಾಜ್ಯದಲ್ಲಿ ಸಂಧ್ಯಾ, ಸುರಕ್ಷಾ ಮತ್ತು ವಿಧವಾ ವೇತನ ಯೋಜನೆಗಳಲ್ಲಿ ಎಷ್ಟು ಜನ ಫಲಾನುಭವಿಗಳಿಗೆ ಮಾಸಿಕ ವೇತನವನ್ನು ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ಹತ್ತು ತಿಂಗಳಿಂದ ಮಾಸಿಕ ವೇತನವನ್ನು ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಯೋಜನೆಗಳಲ್ಲಿ ನೀಡುತ್ತಿರುವ ಮಾಸಿಕ ವೇತನವನ್ನು ಹೆಚ್ಚಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ?

## ಕರ್ನಾಟಕದಲ್ಲಿ ಮುಜರಾಯಿ ದೇವಾಲಯಗಳ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೨೫೫ (೩೯೪) ಮಾನ್ಯ ಮುಜರಾಯಿ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಮುಜರಾಯಿ ಇಲಾಖೆಯಡಿ ಎ.ಬಿ.ಸಿ.ಡಿ. ವರ್ಗದ ದೇವಸ್ಥಾನಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಮುಜರಾಯಿ ಇಲಾಖೆಯಲ್ಲಿ ಇಲ್ಲಿಯವರೆಗೆ ಮಂಜೂರಾದ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು ; ಈವರೆಗೆ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಸಂಖ್ಯೆ ಎಷ್ಟು ;

(ಇ) ಮುಜರಾಯಿ ಇಲಾಖೆಯಡಿಯಲ್ಲಿ ಬರುವ ಎ–ಶ್ರೇಣಿಯ ದೇವಸ್ಥಾನಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಈ) 'ಎ' ಮತ್ತು 'ಬಿ' ಶ್ರೇಣಿಯ ದೇವಸ್ಥಾನಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಯನಿರ್ವಾಹಕರ ಸಂಖ್ಯೆ ಎಷ್ಟು ಮತ್ತು ಯಾವ ಯಾವ ಕಾರ್ಯನಿರ್ವಾಹಕರ ಹುದ್ದೆಗಳು ಖಾಲಿ ಇವೆ ; (ಮಾಹಿತಿ ನೀಡುವುದು)

(ಉ) ರಾಜ್ಯದ ಎಲ್ಲಾ ಜಿಲ್ಲೆಗಳ ಎಲ್ಲಾ ವರ್ಗದ ದೇವಸ್ಥಾನಗಳ ಆಡಳಿತಾತ್ಮಕ ವಿಷಯಗಳ ಬಗ್ಗೆ ಯಾವ ಕಛೇರಿಗಳು ಆಯಾ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ರಾಜ್ಯದಲ್ಲಿ 'ಎ' ಶ್ರೇಣಿಯ ದೇವಸ್ಥಾನಗಳು ಲೆಕ್ಕಪರಿಶೋಧಕರಿಂದ 'ಆಡಿಟ್ ವರದಿ' ಯನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸಿದೆಯೇ ; ಹಾಗಿದ್ದಲ್ಲಿ, ಸಲ್ಲಿಸಿದ ಮತ್ತು ಸಲ್ಲಿಸದ ದೇವಸ್ಥಾನಗಳಾವುವು ? (ಸಂಪೂರ್ಣ ಮಾಹಿತಿ ನೀಡುವುದು)

## ತಹಶೀಲ್ದಾರರು ಮತ್ತು ಭೂಮಾಪಕರ ಬಗ್ಗೆ ಮಾಹಿತಿ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೨೫೬ (೩೯೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ತಹಶೀಲ್ದಾರರು ಮತ್ತು ಭೂ ಮಾಪಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ; (ಮಾಹಿತಿ ನೀಡುವುದು)

(ಆ) ಪ್ರಸ್ತುತ ತಹಶೀಲ್ದಾರರು ಮತ್ತು ಭೂ ಮಾಪಕರು ಕಾರ್ಯನಿರ್ವಹಿಸುತ್ತಿರುವ ಸಂಖ್ಯೆ ಎಷ್ಟು ; ಎಷ್ಟು ಹುದ್ದೆಗಳು ಖಾಲಿ ಇವೆ ; (ಪ್ರಾದೇಶಿಕ ವಿಭಾಗವಾರು, ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳಾವುವು ;

(ಈ) ಕಂದಾಯ ಇಲಾಖೆಯಡಿ ರಾಜ್ಯದಲ್ಲಿ ಬರುವ ೪ ಪ್ರಾದೇಶಿಕ ವಿಭಾಗಗಳ ಅಡಿಯಲ್ಲಿ ಬರುವ ಜಿಲ್ಲೆಗಳಲ್ಲಿ ತಹಶೀಲ್ದಾರರು ಮತ್ತು ಭೂ ಮಾಪಕರ ಮಂಜೂರಾದ ಒಟ್ಟು ಹುದ್ದೆಗಳೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

## ಬೆಂಗಳೂರು ನಗರ ಜಿಲ್ಲೆಯಲ್ಲಿ ಕೃಷಿ ಜಮೀನುಗಳಲ್ಲಿ ಅನಧಿಕೃತ ಬಡಾವಣೆಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೨೫೭ (೩೯೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಲ್ಲಿ ಕೃಷಿ ಜಮೀನುಗಳಲ್ಲಿ ಅನಧಿಕೃತವಾಗಿ ಯಾವುದೇ ಭೂ ಪರಿವರ್ತನೆಯಾಗದೆ ಎಷ್ಟು ಬಡಾವಣೆಗಳು/ನಿವೇಶನಗಳನ್ನು ರಚಿಸಲಾಗಿದೆ ; (ತಾಲ್ಲೂಕುವಾರು, ಹೋಬಳಿವಾರು, ಗ್ರಾಮವಾರು ಮಾಹಿತಿ ನೀಡುವುದು)

(ಆ) ಅನಧಿಕೃತ ಬಡಾವಣೆ ಇದ್ದಲ್ಲಿ, ಕಂದಾಯ ಇಲಾಖೆ ಇಲ್ಲಿಯವರೆಗೂ ಅನಧಿಕೃತ ಬಡಾವಣೆಗಳ ಮೇಲೆ ಭೂ ಪರಿವರ್ತನೆ ಇಲ್ಲದೆ ಇರತಕ್ಕಂತ ಕೃಷಿ ಜಮೀನುಗಳ ಮೇಲೆ ನಿರ್ಮಾಣವಾಗಿರುವ ಹಳೆಯ ಮತ್ತು ಹೊಸ ಬಡಾವಣೆಗಳ ಮೇಲೆ ಕಾನೂನಿನಡಿಯಲ್ಲಿ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಉಪ ನೋಂದಣಾಧಿಕಾರಿಗಳು ಮತ್ತು ಕಛೇರಿಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೨೫೮ (೩೯೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಉಪ ನೋಂದಣಾಧಿಕಾರಿಗಳ ಕಛೇರಿಗಳು ಎಷ್ಟಿವೆ ; ಉಪ ನೋಂದಣಾಧಿಕಾರಿಗಳ ನೇಮಕ ಮಾಡುವಾಗ ಇರುವ ಮಾನದಂಡಗಳೇನು ;

(ಆ) ಬೆಂಗಳೂರು ನಗರ ವ್ಯಾಪ್ತಿಯ ಉಪ ನೋಂದಣಾಧಿಕಾರಿಗಳ ಕಛೇರಿಗಳಲ್ಲಿ ಕಳೆದ ೫ ವರ್ಷಗಳಲ್ಲಿ ನೋಂದಣಾಧಿಕಾರಿಯಾಗಿರುವ ಸ್ವತ್ತು/ ಕ್ರಯಪತ್ರ/ ಗುತ್ತಿಗೆ ಕರಾರು ಪತ್ರ/ ಇತರೆ ಸ್ವತ್ತುಗಳಿಗೆ ಸಂಬಂಧಿಸಿದಂತೆ ನೋಂದಣಿಯಾದ ಸಂಖ್ಯೆಗಳೆಷ್ಟು ? (ಕಳೆದ ೫ ವರ್ಷಗಳಿಂದ ಪ್ರತಿ ನೋಂದಣಿ ಕಛೇರಿಯ ವರ್ಷವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಅರಣ್ಯ ಗೃಹಗಳ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೯ (೩೨೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅರಣ್ಯ ಇಲಾಖೆ ವ್ಯಾಪ್ತಿಯಲ್ಲಿರುವ ಅರಣ್ಯ ವಸತಿ ಗೃಹಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಅಗತ್ಯ ಮೂಲಸೌಕರ್ಯ ಒದಗಿಸಲಾಗದ ವಸತಿ ಗೃಹಗಳ ಸಂಖ್ಯೆ ಎಷ್ಟು ;

(ಆ) ಚಿತ್ರದುರ್ಗ ಜಿಲ್ಲೆಯ ಜೋಗಿಮಟ್ಟಿ ಅರಣ್ಯ ವಸತಿ ಗೃಹದ ಕಾರ್ಯಕಲ್ಪಕ್ಕೆ ಹಾಗೂ ಮೂಲಸೌಕರ್ಯ ಒದಗಿಸಲು ಅರಣ್ಯ ಇಲಾಖೆ ಪ್ರಸಕ್ತ ವರ್ಷ ಮೀಸಲಿಟ್ಟಿರುವ ಅನುದಾನ ಎಷ್ಟು ; (ಮಾಹಿತಿ ನೀಡುವುದು)

(ಇ) ೨೦೧೮–೧೯ನೇ ಸಾಲಿನಲ್ಲಿ ಚಿತ್ರದುರ್ಗ ಜಿಲ್ಲೆಯ ಅರಣ್ಯ ಇಲಾಖೆ ವತಿಯಿಂದ ನಡೆಸಲಾಗಿರುವ ಗಿಡಗಳ ಸಂಖ್ಯೆ ಎಷ್ಟು ; ಅದಕ್ಕೆ ವ್ಯಯಿಸಲಾದ ಅನುದಾನ ಎಷ್ಟು ? (ಮಾಹಿತಿ ನೀಡುವುದು)

## ಬೆಂಗಳೂರು ನಗರ ಜಿಲ್ಲೆಯ ಮೊಕದ್ದಮೆಗಳ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೦ (೩೩೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯ ಜಿಲ್ಲಾಧಿಕಾರಿಗಳು ಮತ್ತು ಉಪವಿಭಾಗಾಧಿಕಾರಿಗಳ ವ್ಯಾಪ್ತಿಯಲ್ಲಿ ಭೂಮಿ ವಿಚಾರವಾಗಿ ವಿಚಾರಣೆ ನಡೆಯುತ್ತಿರುವ ಮೊಕದ್ದಮೆಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಆ) ಇದರಲ್ಲಿ ಕಳೆದ ೫ ವರ್ಷಗಳಿಂದಲೂ ವಿಚಾರಣೆ ನಡೆಯುತ್ತಿರುವ ಮೊಕದ್ದಮೆಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಇ) ಕಳೆದ ೫ ವರ್ಷಗಳಲ್ಲಿ ಇತ್ಯರ್ಥವಾದ ಮೊಕದ್ದಮೆಗಳ ಸಂಖ್ಯೆ ಎಷ್ಟು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಭಿಕ್ಷಾಟನೆ ನಿರ್ಮೂಲನೆ ಮಾಡುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೬೧ (೧೭೨) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಭಿಕ್ಷಾಟನೆ ನಿರ್ಮೂಲನೆ ಮಾಡಲು ಸರ್ಕಾರ ಕೈಗೊಂಡಿರುವ ಅಗತ್ಯ ಕ್ರಮಗಳೇನು ;

(ಆ) ಮಹಿಳೆಯರು, ಮಕ್ಕಳು, ವೃದ್ಧರು ಮತ್ತು ಮಂಗಳಮುಖಿಯರು ಭಿಕ್ಷೆ ಬೇಡುತ್ತಿದ್ದು, ಇದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಭಿಕ್ಷಕರಿಗೆ ಪುನರ್ವಸತಿ ಕೇಂದ್ರಗಳನ್ನು ತೆರೆಯಲಾಗಿದೆಯೇ ;

(ಈ) ಭಿಕ್ಷಾಟನೆಯನ್ನು ನಿರ್ಮೂಲನೆ ಮಾಡಲು ಸರ್ಕಾರ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುವುದೇ ?

## ಚಾಮರಾಜನಗರ ಜಿಲ್ಲೆಯ ಅಂಗನವಾಡಿ ಕಟ್ಟಡಗಳ ನಿರ್ಮಾಣದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೬೨ (೧೭೧) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳೆಷ್ಟು ; ಇವುಗಳಲ್ಲಿ ಸ್ವಂತ ಕಟ್ಟಡ ಇಲ್ಲದ ಅಂಗನವಾಡಿ ಕೇಂದ್ರಗಳೆಷ್ಟು ; (ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಿಂದ ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗೆಂದು ಲಭ್ಯವಿರುವ ಅನುದಾನದಲ್ಲಿ ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲು ಜಿಲ್ಲೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ವಿವರ ನೀಡುವುದು)

(ಇ) ಈ ಅನುದಾನದಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳನ್ನು ನಿರ್ಮಿಸಲಾಗಿದೆ ; (ವಿವರ ನೀಡುವುದು)

(ಈ) ಸ್ವಂತ ಕಟ್ಟಡಗಳಿಲ್ಲದ ಅಂಗನವಾಡಿ ಕೇಂದ್ರಗಳಿಗೆ ಯಾವಾಗ ಕಟ್ಟಡಗಳನ್ನು ನಿರ್ಮಿಸಲಾಗುವುದು ? (ವಿವರ ನೀಡುವುದು)

## ಸರ್ವೇ ಕಾರ್ಯ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೬೩ (೧೭೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ಇಲಾಖೆಯಲ್ಲಿ ಮಂಜೂರಾದ ಒಟ್ಟು ಸರ್ವೇಯರ್ ಹುದ್ದೆಗಳೆಷ್ಟು ; ಇದರಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಸರ್ವೇಯರುಗಳು ಸರ್ವೇ ಕಾರ್ಯ ಮಾಡಲು ವಿಳಂಬ ಮಾಡುತ್ತಿರುವುದರಿಂದ ರೈತರಿಗೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸರ್ಕಾರ ಅಗತ್ಯ ಸರ್ವೇಯವರುಗಳನ್ನು ನೇಮಿಸಿ ಸಕಾಲದಲ್ಲಿ ರೈತರಿಗೆ ಸೇವೆ ಒದಗಿಸಲು ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಸಾಮಾಜಿಕ ಅರಣ್ಯ ಪ್ರದೇಶದಲ್ಲಿನ ಅಕ್ರಮಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೬೪ (೩೧೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಹತ್ತು ವರ್ಷಗಳ ಹಿಂದೆ ಗುಲ್ಬರ್ಗಾ ಜಿಲ್ಲೆಯಲ್ಲಿ ಸಾಮಾಜಿಕ ಅರಣ್ಯ ಪ್ರದೇಶ ಹಾಗೂ ಪ್ರಸ್ತುತವಿರುವ ವಿಸ್ತೀರ್ಣ ಎಷ್ಟು ; (ಹೆಕ್ಟೇರ್‌ನಲ್ಲಿ ವಿವರ ನೀಡುವುದು) ಮತ್ತು ಹತ್ತು ವರ್ಷಗಳಲ್ಲಿ ಹೆಚ್ಚಾಗಿದ್ದಲ್ಲಿ ಶೇಕಡವಾರು ವಿವರ ನೀಡುವುದು)

(ಆ) ಈ ಜಿಲ್ಲೆಯಲ್ಲಿ ಸಾಮಾಜಿಕ ಅರಣ್ಯ ಪ್ರದೇಶ ವಿಸ್ತರಿಸಲು ಕಳೆದ ಹತ್ತು ವರ್ಷಗಳಲ್ಲಿ ಖರ್ಚು ಮಾಡಲಾದ ಹಣ ಎಷ್ಟು ; ಪ್ರತಿ ಗಿಡಕ್ಕೆ ಖರ್ಚು ಮಾಡುವ ಹಣ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ಹತ್ತು ವರ್ಷಗಳಲ್ಲಿ ನೆಟ್ಟ ಗಿಡಗಳ ಸಂಖ್ಯೆ ಎಷ್ಟು ; ಅವುಗಳನ್ನು ಪೋಷಿಸಲು ಕೈಗೊಂಡ ಕ್ರಮಗಳೇನು ಹಾಗೂ ಹತ್ತು ವರ್ಷಗಳ ಹಿಂದೆ ನೆಟ್ಟ ಗಿಡಗಳ ಸಂಖ್ಯೆ ಎಷ್ಟು ; ಆ ಗಿಡಗಳ ಸುತ್ತಳತೆ ಎಷ್ಟು ; ಈಗಿರುವ ಗಿಡಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಕೊಡಗು ಜಿಲ್ಲೆಯ ಪ್ರವಾಹ ಪೀಡಿತ ಪ್ರದೇಶದ ಪುನರ್ವಸತಿಯಲ್ಲಿನ ಗೊಂದಲದ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬೫ (೩೧೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಒಂದು ವರ್ಷದ ಹಿಂದೆ ಕೊಡಗು ಜಿಲ್ಲೆಯ ಪ್ರವಾಹ ಪೀಡಿತ ಪ್ರದೇಶದಲ್ಲಿ ಪುನರ್ವಸತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಪ್ರವಾಹ ಪೀಡಿತ ಪ್ರದೇಶಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಅನುದಾನ ಹಾಗೂ ವಿವಿಧ ಸಾರ್ವಜನಿಕ, ಖಾಸಗಿ ಸಂಸ್ಥೆಗಳು ನೀಡಿರುವ ದೇಣಿಗೆಯು ವಿವರಗಳನ್ನು ಪ್ರತ್ಯೇಕವಾಗಿ ಒದಗಿಸುವುದು ;

(ಇ) ಜಿಲ್ಲೆಯಲ್ಲಿ ಪ್ರವಾಹಕ್ಕೆ ತುತ್ತಾಗಿ ಮನೆಗಳನ್ನು ಕಳೆದುಕೊಂಡವರ ಸಂಖ್ಯೆ ಎಷ್ಟು ; ಇಲ್ಲಿಯವರೆಗೆ ಮನೆಗಳನ್ನು ಕಳೆದುಕೊಂಡ ಸಂತ್ರಸ್ಥರಿಗೆ ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ ಹಾಗೂ ಇಲ್ಲಿಯುವರೆಗೆ ಎಷ್ಟು ಮನೆಗಳನ್ನು ಹಂಚಿಕೆ ಮಾಡಿ ಹಸ್ತಾಂತರಿಸಲಾಗಿದೆ ;

(ಈ) ನಿವೇಶನವನ್ನು ಕಳೆದುಕೊಂಡವರಿಗೆ ನಿವೇಶನಗಳನ್ನು ನೀಡಲು ಎಷ್ಟು ಜಾಗವನ್ನು ಕಾಯ್ದಿರಿಸಲಾಗಿದೆ ಹಾಗೂ ಎಷ್ಟು ನಿವೇಶನಗಳನ್ನು ನೀಡಲಾಗುವುದು ; ಇಲ್ಲಿಯವರೆವಿಗೆ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಿ ನೀಡಲಾಗಿದೆ ? (ವಿವರ ನೀಡುವುದು)

## ಮುಜರಾಯಿ ದೇವಾಲಯಗಳಿಗೆ ಬಂದ ಆದಾಯದ ವೆಚ್ಚದ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬೬ (೩೧೬) ಮಾನ್ಯ ಮುಜರಾಯಿ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರಸಿದ್ಧ ದೇವಾಲಯಗಳಾದ ಶ್ರೀ ಮಲೇಮಹದೇಶ್ವರ ದೇವಸ್ಥಾನ, ಮಹದೇಶ್ವರ ಬೆಟ್ಟ, ಶ್ರೀ ಸುಬ್ರಮಣ್ಯ ದೇವಾಲಯ, ಕುಕ್ಕೆ ಸುಬ್ರಮಣ್ಯ ದಕ್ಷಿಣ ಕನ್ನಡ ಜಿಲ್ಲೆ ಹಾಗೂ ಶ್ರೀ ಕಂಠೇಶ್ವರ ದೇವಾಲಯ, ನಂಜನಗೂಡು, ಮೈಸೂರು ಜಿಲ್ಲೆ ಇವುಗಳಿಗೆ ಕಳೆದ ಮೂರು ವರ್ಷಗಳಲ್ಲಿ ಎಲ್ಲಾ ಮೂಲಗಳಿಂದ ಬಂದ ಆದಾಯ ಎಷ್ಟು ; (ವಿವರ ನೀಡುವುದು)

(ಆ) ಈ ದೇವಾಲಯಗಳ ಅಭಿವೃದ್ಧಿಗೆ ಬಳಸಲಾದ ಹಣ ಎಷ್ಟು ; (ಕೆಲಸಗಳವಾರು ವಿವರ ನೀಡುವುದು)

(ಇ) ಈ ದೇವಾಲಯಗಳಿಗೆ ಬಂದ ಆದಾಯವು ಬಳಸಲಾದ ಹಣಕ್ಕಿಂತ ಹೆಚ್ಚಿದ್ದಲ್ಲಿ ಉಳಿಕೆ ಹಣವನ್ನು ಏನು ಮಾಡಲಾಗುತ್ತದೆ ? (ವಿವರ ನೀಡುವುದು)

## ರಾಜ್ಯದಲ್ಲಿ ಸರ್ಕಾರಿ ಆಸ್ತಿಗಳ ಒತ್ತುವರಿಗಳನ್ನು ತೆರವುಗೊಳಿಸಲು ಕೈಗೊಂಡಿರುವ ಕ್ರಮಗಳ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬೭ (೩೧೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರಿ ಭೂಮಿಗಳನ್ನು ಒತ್ತುವರಿ ಮಾಡಿರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ಹಾಗೂ ಕೊಡಗು ಜಿಲ್ಲೆಯಲ್ಲಿ ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಒತ್ತುವರಿಯನ್ನು ತೆರವುಗೊಳಿಸಲು ಕಂದಾಯ ಇಲಾಖೆಯು ಕೈಗೊಂಡ ಕಠಿಣ ಕಾನೂನು ಕ್ರಮಗಳೇನು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಇಲ್ಲಿಯವರೆಗೂ ಸರ್ಕಾರಿ ಕೆರೆಗಳು, ಸ್ಮಶಾನ ಒತ್ತುವರಿ ಭೂಮಿಗಳನ್ನು ತೆರವುಗೊಳಿಸಿರುವ ಪ್ರಕರಣಗಳೆಷ್ಟು ? (ಜಾಗದ ವಿವರಗಳೊಂದಿಗೆ ಜಿಲ್ಲಾವಾರು ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಪ್ರವಾಹ ಸಂತ್ರಸ್ಥರಿಗೆ ಮನೆಗಳ ನಿರ್ಮಾಣ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬೮ (೩೧೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗಿನಲ್ಲಿ ಭೂಕುಸಿತದಿಂದ ಹಾನಿಗೀಡಾದ ಪ್ರದೇಶದ ನಿರಾಶ್ರಿತರು ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಎಷ್ಟು

ಜನರಿಗೆ ಪರಿಹಾರ ನೀಡಲಾಗಿದೆ ; (ಗ್ರಾಮಗಳವಾರು ವಿವರ ನೀಡುವುದು)

(ಆ) ಮಳೆಯಿಂದ ಹಾನಿಗೀಡಾದ ಸಂತ್ರಸ್ಥರಿಗೆ ಮನೆಗಳನ್ನು ನಿರ್ಮಿಸಿಕೊಡುವ ಕಾರ್ಯದಲ್ಲಿ ಇಲ್ಲಿಯವರೆವಿಗೆ ಕಟ್ಟಲಾಗಿರುವ ಮನೆಗಳ ವಿವರಗಳೊಂದಿಗೆ ಜುಲೈ–೨೦೧೯ರ ವರೆವಿಗೆ ಆಗಿರುವ ಪ್ರಗತಿಯ ವಿವರ ನೀಡುವುದು ;

(ಇ) ಮನೆಗಳನ್ನು ಕಳೆದುಕೊಂಡ ಜನರಿಗೆ ತಿಂಗಳ ಲೆಕ್ಕದಲ್ಲಿ ಬಾಡಿಗೆ ಹಣವನ್ನು ಇಲ್ಲಿಯವರೆವಿಗೂ ನೀಡಲಾಗುತ್ತಿದೆಯೇ ; ಇದ್ದಲ್ಲಿ ಎಷ್ಟು ಜನರಿಗೆ ಹಾಗೂ ಎಷ್ಟು ಹಣವನ್ನು ನೀಡಲಾಗಿದೆ ? (ವಿವರ ನೀಡುವುದು)

## ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳ ಯಾವ ಯಾವ ತಾಲ್ಲೂಕುಗಳು ಬರಗಾಲ ಪೀಡಿತ ಪ್ರದೇಶಗಳ ಬಗ್ಗೆ

**ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು):–**

೨೬೯ (೩೩೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳ ಯಾವ ಯಾವ ತಾಲ್ಲೂಕುಗಳನ್ನು ಬರಗಾಲ ಪೀಡಿತ ಪ್ರದೇಶಗಳೆಂದು ಘೋಷಣೆ ಮಾಡಲಾಗಿದೆ ; ಬರದಿಂದ ಆಗಿರುವ ಬೆಳೆ ಹಾನಿ ಕುರಿತು ಮಾಹಿತಿ ನೀಡುವುದು ;

(ಆ) ಬರ ಎದುರಿಸುವುದಕ್ಕಾಗಿ ಎರಡೂ ಜಿಲ್ಲೆಗಳ ಯಾವ ಯಾವ ತಾಲ್ಲೂಕುಗಳಿಗೆ ಹಣ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಎರಡು ಜಿಲ್ಲೆಗಳಲ್ಲಿ ಮಂಜೂರಾಗಿರುವ ಬರ ಪರಿಹಾರ ಕಾಮಗಾರಿಗಳೆಷ್ಟು ; ಎಷ್ಟು ಕಾಮಗಾರಿ ಪೂರ್ಣಗೊಳಿಸಲಾಗಿದೆ ; ಉಳಿದ ಕಾಮಗಾರಿಗಳೆಷ್ಟು ? (ವಿವರ ನೀಡುವುದು)

## ಕಲಬುರಗಿಯಲ್ಲಿ ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಂಗಣ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು):–**

೨೭೦ (೩೩೯) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಭಾಗೀಯ ಕೇಂದ್ರವಾಗಿರುವ ಕಲಬುರಗಿಯಲ್ಲಿ ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಂಗಣ ನಿರ್ಮಾಣ ಮಾಡಬೇಕೆಂಬ ಬೇಡಿಕೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳೇನು ;

(ಆ) ಹೊಸ ಕ್ರೀಡಾಂಗಣ ನಿರ್ಮಾಣಕ್ಕಾಗಿ ಜಮೀನು ಗುರುತಿಸಲಾಗಿದೆಯೇ ? (ವಿವರ ನೀಡುವುದು)

## ಕೊಡಗು ಜಿಲ್ಲೆ, ನಾಪೋಕ್ಲು ನಾಡು ನಾಡು ಯವಳಪಾಡಿಯ ರೀಡೀಮ್ಡ್ ಸಾಗಿತೋಟಕ್ಕೆ ಹಾಗೂ ವಾಸದ ಮನೆಗೆ ಹೋಗಲು ಅಡ್ಡಿಪಡಿಸುತ್ತಿರುವ ಬಗ್ಗೆ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೭೧ (೩೨೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆ, ನಾಪೋಕ್ಲು ನಾಡು ಯವಳಪಾಡಿಯ ರೀಡೀಮ್ಸ್ ಸಾಗುತೋಟಕ್ಕೆ ಹಾಗೂ ವಾಸದ ಮನೆಗೆ ಹೋಗುವ ರಸ್ತೆಯಲ್ಲಿ ಇತ್ತೀಚೆಗೆ ಗುಂಡಿ ತೋಡಿ, ಅವೈಜ್ಞಾನಿಕ ನಿರ್ಬಂಧ ಹೇರಿರುವುದರಿಂದ ತೋಟದ ಮಾಲೀಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಹಲವಾರು ವರ್ಷಗಳಿಂದ ಇಲ್ಲದ ಈ ರೀತಿಯ ನಿರ್ಬಂಧಗಳನ್ನು ಇತ್ತೀಚೆಗೆ ಹೇರಲು ಕಾರಣಗಳೇನು ;

(ಇ) ಈ ಬಗ್ಗೆ ವಾಸ್ತವಾಂಶಗಳನ್ನು ಪರಿಶೀಲಿಸಿ ಈ ರೀತಿಯ ಅವೈಜ್ಞಾನಿಕ ನಿರ್ಬಂಧಗಳನ್ನು ಕೈಬಿಡಲಾಗುವುದೇ ?

## ಕೊಡಗು ಜಿಲ್ಲೆಯಲ್ಲಿ ಕಳೆದ ವರ್ಷ ಸಂಭವಿಸಿದ ಪ್ರಕೃತಿ ವಿಕೋಪದಲ್ಲಿ ಮನೆ ಕಳೆದುಕೊಂಡವರ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೭೨ (೩೨೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ವರ್ಷ ಸಂಭವಿಸಿದ ಪ್ರಕೃತಿ ವಿಕೋಪದಲ್ಲಿ ಮನೆ ಕಳೆದುಕೊಂಡು ನಿರಾಶ್ರಿತರಾದವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ನಿರಾಶ್ರಿತರಾದವರಿಗೆ ಸರ್ಕಾರದಿಂದ ದೊರೆತಿರುವ ಪರಿಹಾರ, ಸಹಾಯಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಈ ನಿರಾಶ್ರಿತರಲ್ಲಿ ಸರ್ಕಾರದಿಂದ ನಿರ್ಮಿಸಿಕೊಡುವ ಮನೆಗಳನ್ನು ಕೋರಿರುವವರ ಸಂಖ್ಯೆ ಎಷ್ಟು ; ಹಾಗೂ ಬೇರೆ ರೀತಿಯ ಪರಿಹಾರ ಕ್ರಮಗಳನ್ನು ಬಯಸಿರುವವರ ಸಂಖ್ಯೆ ಎಷ್ಟು ;

(ಈ) ಎಷ್ಟು ನಿರಾಶ್ರಿತರಿಗೆ ಮನೆ ಹಸ್ತಾಂತರಿಸಲಾಗಿದೆ ; ಎಷ್ಟು ನಿರಾಶ್ರಿತರಿಗೆ ಬೇರೆ ರೀತಿಯ ಪರಿಹಾರ ವ್ಯವಸ್ಥೆ ಕಲ್ಪಿಸಲಾಗಿದೆ ?

## ಬೀದರ್ ಜಿಲ್ಲೆಯಲ್ಲಿ ಮುಂಗಾರು ಹಂಗಾಮು ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೭೩ (೩೩೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಮುಂಗಾರು ಆರಂಭವಾಗಿ ಐದು ವಾರಗಳಾದರೂ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದೆ ಶೇ. ೫೦ ರಷ್ಟು ರೈತರು ಇನ್ನೂ ಬಿತ್ತನೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಿಲ್ಲೆಯಲ್ಲಿ ಬರ ಪರಿಸ್ಥಿತಿ ನಿರ್ಮಾಣವಾಗಿದ್ದು, ಸರ್ಕಾರವು ಕೈಗೊಂಡ ಕ್ರಮಗಳು ಯಾವುವು ?

## ಬೆಂಗಳೂರಿನ ಉಪ ನೋಂದಣಾಧಿಕಾರಿ ಕಛೇರಿಯಲ್ಲಿನ ದತ್ತಾಂಶಗಳನ್ನು ಅಕ್ರಮವಾಗಿ ತಿದ್ದಿ ಮಾರಾಟ ಮಾಡಿರುವ ಬಗ್ಗೆ

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):–**

೨೭೪ (೧೮೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿನ ಸ್ವತ್ತುಗಳು ಒಬ್ಬರಿಂದ ಒಬ್ಬರಿಗೆ ಮಾರಾಟವಾದ ಸಂದರ್ಭದಲ್ಲಿ ಉಪ ನೋಂದಣಾಧಿಕಾರಿ

ಕಛೇರಿಯಲ್ಲಿ ನೋಂದಣಿಯಾಗುತ್ತಿದ್ದು, ಹೀಗೆ ನೋಂದಣಿಯಾದ ದತ್ತಾಂಶಗಳು ಇಲಾಖೆಯ ಸರ್ವರ್‌ನಲ್ಲಿ ಸಂಗ್ರಹಿಸಲ್ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿ ಸಂಗ್ರಹಿಸಲಾದ ದತ್ತಾಂಶಗಳನ್ನು ಕೆಲವರು ಇಂಟರ್‌ನೆಟ್ ಹ್ಯಾಕ್ ಮಾಡಿ ನಿವೇಶನ ಸಂಖ್ಯೆಗಳನ್ನು ತಿದ್ದಿ, ನಕಲಿ ದಾಖಲೆಗಳನ್ನು ಸೃಷ್ಟಿಸಿ ಬೇರೆಯವರಿಗೆ ಮಾರಾಟ ಮಾಡಿರುವ ಪ್ರಕರಣಗಳು ಬೆಂಗಳೂರು ನಗರದಲ್ಲಿ ಹೆಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಗಮನಕ್ಕೆ ಬಂದಿದ್ದಲ್ಲಿ, ಸರ್ಕಾರ ಸಂಬಂಧಪಟ್ಟ ವ್ಯಕ್ತಿಗಳ ಮೇಲೆ ದಾಖಲಿಸಿರುವ ಪ್ರಕರಣಗಳೆಷ್ಟು ಹಾಗೂ ಕೈಗೊಂಡಿರುವ ಕ್ರಮಗಳೇನು ;

(ಈ) ಇಂತಹ ಪ್ರಕರಣಗಳಿಂದ ಸರ್ಕಾರದ ಬೊಕ್ಕಸಕ್ಕೆ ಆಗಿರುವ ಹಾನಿ ಎಷ್ಟು ?

## ಹುಮನಾಬಾದ್ ಕೈಗಾರಿಕಾ ಪ್ರದೇಶದಿಂದ ಪರಿಸರ ಮಾಲಿನ್ಯ ಆಗುತ್ತಿರುವ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೭೫ (೩೩೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಮನಾಬಾದ್ ಕೈಗಾರಿಕಾ ಪ್ರದೇಶದಿಂದ ಪರಿಸರ ಮಾಲಿನ್ಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕೈಗಾರಿಕಾ ಪ್ರದೇಶದ ಸುತ್ತಲಿನ ಮಾಣಿಕನಗರ, ಗಡವಂತಿ, ಮತ್ತಿತರ ಗ್ರಾಮಗಳಲ್ಲಿ ಅಂತರ್ಜಲ ಕಲುಷಿತಗೊಂಡು ಜನರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿರುವುದು ನಿಜವೇ ;

(ಇ) ಹಾಗಿದ್ದಲ್ಲಿ, ಪರಿಸರ ಮತ್ತು ಜಲ ಮಾಲಿನ್ಯವನ್ನು ತಡೆಯಲು ಸರ್ಕಾರವು ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿ ಪ್ಲಾಸ್ಟಿಕ್ ತ್ಯಾಜ್ಯದ ನಿರ್ವಹಣೆ ಕುರಿತು

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭೬ (೧೮೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಹಸಿರು ನ್ಯಾಯಾಧಿಕರಣದ (ಎನ್.ಜಿ.ಟಿ) ಆದೇಶದ ಪ್ರಕಾರ ರಾಜ್ಯ ಸರ್ಕಾರ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ ಕುರಿತಂತೆ ಕ್ರಿಯಾ ಯೋಜನೆ ರೂಪಿಸಿದೆಯೇ ;

(ಆ) ಹಾಗಿದ್ದಲ್ಲಿ, ಪೂರ್ಣ ವಿವರವನ್ನು ಒದಗಿಸುವುದು ; ನಗರದಲ್ಲಿ ಪರಿಣಾಮಕಾರಿ ತ್ಯಾಜ್ಯ ವಿಲೇವಾರಿಗೆ ರಾಜ್ಯ ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ;

(ಇ) ಕಳೆದ ಒಂದು ವರ್ಷದಲ್ಲಿ ತ್ಯಾಜ್ಯ ನಿರ್ವಹಣೆಗಾಗಿ ರಾಜ್ಯ ಸರ್ಕಾರ ಮಾಡಿರುವ ಖರ್ಚು–ವೆಚ್ಚಗಳ ವಿವರವನ್ನು ಒದಗಿಸುವುದು?

## ಕಾರ್ಮಿಕ ಇಲಾಖೆಯಿಂದ ಪರವಾನಗಿ ಪಡೆಯುವ ಬಗ್ಗೆ

**ಶ್ರೀ ಸಿ. ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೭೭ (೩೫೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರ್ಮಿಕ ಇಲಾಖೆಯ ವ್ಯಾಪ್ತಿಗೆ ಒಳಪಡುವ ಕಾರ್ಖಾನೆ ಸಂಸ್ಥೆಗಳು ಯಾವುವು; ಇಲಾಖೆಯಿಂದ ಪರವಾನಗಿಯನ್ನು ಪಡೆಯಲು ಅನುಸರಿಸಲಾಗುವ ಮಾನದಂಡಗಳೇನು ; ಮತ್ತು ತಗಲುವ ವೆಚ್ಚವೆಷ್ಟು ; (ವಿವರ ನೀಡುವುದು)

(ಆ) ಪರವಾನಗಿಯನ್ನು ಪಡೆದ ಸಂಸ್ಥೆಗಳಲ್ಲಿ ಕಾರ್ಮಿಕ ಕಲ್ಯಾಣಕ್ಕಾಗಿ ಯಾವ ಯಾವ ಯೋಜನೆಗಳನ್ನು ರೂಪಿಸಬೇಕಾಗಿದೆ ;

(ಇ) ಕಳೆದ ೩ ವರ್ಷಗಳಲ್ಲಿ ಇಲಾಖೆಯಿಂದ ಪರವಾನಗಿ ಪಡೆಯದೆ ಕಾರ್ಯನಿರ್ವಹಿಸುತ್ತಿರುವ ಕಾರ್ಖಾನೆ/ಸಂಸ್ಥೆಗಳು ಯಾವುವು; (ವರ್ಷವಾರು, ಜಿಲ್ಲಾವಾರು ವಿವರಗಳನ್ನು ನೀಡುವುದು)

(ಈ) ಇಂತಹ ಕಾರ್ಖಾನೆ/ಸಂಸ್ಥೆಗಳ ವಿರುದ್ಧ ಸರ್ಕಾರ ಕ್ರಮ ಕೈಗೊಂಡಿದೆಯೇ ; ಹಾಗಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು;

(ಉ) ಕಟ್ಟಡ ನಿರ್ಮಾಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುವ ಕಾರ್ಮಿಕರು ನಿರ್ಮಾಣ ಸ್ಥಳದಲ್ಲಿ ಅಕಾಲಿಕ ಸಾವಿಗೆ ತುತ್ತಾದಲ್ಲಿ ಮೃತರ ಕುಟುಂಬಕ್ಕೆ ಪರಿಹಾರವನ್ನು ಭರಿಸುವವರು ಯಾರು; (ಘಟನೆಯಾದಾರಿತ ವಿವರಗಳನ್ನು ನೀಡುವುದು)

(ಊ) ಕಳೆದ ೩ ವರ್ಷಗಳಲ್ಲಿ ಈ ರೀತಿಯ ಎಷ್ಟು ಪ್ರಕರಣಗಳು ದಾಖಲಾಗಿವೆ; ಇವುಗಳಲ್ಲಿ ಎಷ್ಟು ಮೃತರ ಕುಟುಂಬಕ್ಕೆ ಪರಿಹಾರವನ್ನು ಒದಗಿಸಲಾಗಿದೆ; (ಜಿಲ್ಲಾವಾರು ಮತ್ತು ವರ್ಷವಾರು ವಿವರಗಳನ್ನು ನೀಡುವುದು) ಹಾಗೂ ಪರಿಹಾರ ಒದಗಿಸದಿರುವ ಪ್ರಕರಣಗಳೆಷ್ಟು ?

## ಗ್ರಾಮಠಾಣಾ ವ್ಯಾಪ್ತಿಯ ಆಸ್ತಿ ದಾಖಲಾತಿಯ ನಿರ್ವಹಣೆಯ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೨೭೮ (೩೨೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಖಾನೇಷುಮಾರಿ ಅಥವಾ ಗ್ರಾಮ ಠಾಣಾ ವ್ಯಾಪ್ತಿಯ ಆಸ್ತಿ ದಾಖಲಾತಿ ನಿರ್ವಹಣೆಯನ್ನು ಪ್ರಸ್ತುತ ಯಾವ ಇಲಾಖೆಗೆ ನೀಡಲಾಗಿದೆ ; ಈ ಹಿಂದೆ ಯಾವ ಇಲಾಖೆಯು ನಿರ್ವಹಿಸುತ್ತಿತ್ತು;

(ಆ) ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕು, ಸೋಮಶೆಟ್ಟಿಹಳ್ಳಿ ಗ್ರಾಮದ ಗ್ರಾಮಠಾಣಾ ವ್ಯಾಪ್ತಿಯ ಆಸ್ತಿ ದಾಖಲಾತಿಗಳನ್ನು ಕಂದಾಯ ಇಲಾಖೆಯಿಂದ ಗ್ರಾಮೀಣಾಭಿವೃದ್ಧಿ ಇಲಾಖೆಗೆ ಹಸ್ತಾಂತರಿಸಲಾಗಿದೆಯೇ ;

(ಇ) ಹಾಗಿದ್ದಲ್ಲಿ, ಅವುಗಳ ಸಂಪೂರ್ಣ ವಿವರಗಳನ್ನು ನೀಡುವುದು ; ಯಾವ ಅಧಿಕಾರಿ ಯಾರಿಗೆ ದಾಖಲಾತಿಗಳನ್ನು ಹಸ್ತಾಂತರಿಸಿದ್ದಾರೆ? (ಹೆಸರು ಮತ್ತು ಹುದ್ದೆಗಳ ವಿವರ ನೀಡುವುದು; ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕು ಖಾನೇಷುಮಾರಿ ನಂ. ೮೧, ೮೧/೧ ಮತ್ತು ೮೧/೨ ಆಸ್ತಿಯ ಮೂಲ ದಾಖಲಾತಿಯ ಪ್ರತಿ ನೀಡುವುದು)

## ಖಾಸಗಿ ನಿವೇಶನಗಳಲ್ಲಿ ಬೆಳೆದಿರುವ ಮರಗಳನ್ನು ಮನೆ ನಿರ್ಮಾಣದ ಸಲುವಾಗಿ ತೆರವುಗೊಳಿಸುವ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೨೭೯ (೩೨೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಗರ ಪ್ರದೇಶದ ಖಾಸಗಿ ನಿವೇಶನಗಳಲ್ಲಿ ಬೆಳೆದಿರುವ ಮರಗಳನ್ನು ಮನೆ ನಿರ್ಮಿಸುವ ಸಲುವಾಗಿ ಕಡಿಯಲು ಅವಕಾಶವಿಲ್ಲವೇ ;

(ಆ) ಯಾವುದಾದರೂ ಕಾಯ್ದೆ ಅಥವಾ ಆದೇಶದಲ್ಲಿ ಖಾಸಗೀ ನಿವೇಶನಗಳಲ್ಲಿ ಬೆಳೆದಿರುವ ಮರಗಳನ್ನು ಮನೆ ನಿರ್ಮಿಸುವ ಸಲುವಾಗಿ ಕಡಿಯಬಾರದೆಂದು ತಿಳಿಸಲಾಗಿದೆಯೇ ; (ಆದೇಶದ ಪ್ರತಿಯನ್ನು ನೀಡುವುದು)

(ಇ) ಜೀವಮಾನದ ದುಡಿಮೆ ನೀಡಿ, ನಿವೇಶನ ಖರೀದಿಸಿ, ಮನೆ ನಿರ್ಮಿಸುವ ಸಲುವಾಗಿ ಖಾಸಗಿ ನಿವೇಶನದಲ್ಲಿ (ತನ್ನ ಸ್ವತಃ ಮರ ಕಡಿಯಲು ಅನುಮತಿ ನೀಡದಿದ್ದಲ್ಲಿ, ಅವರು ಮನೆ ನಿರ್ಮಿಸಿಕೊಂಡು ಬದಕುವ ಅವರ ಹಕ್ಕಿಗೆ ಅಡ್ಡಿಪಡಿಸಿದಂತೆ ಆಗುವುದಿಲ್ಲವೆ ;

(ಈ) ವಸತಿ ಉದ್ದೇಶಕ್ಕಾಗಿ ಖಾಸಗಿ (ಸ್ವಂತ) ನಿವೇಶನದಲ್ಲಿರುವ ಮರ ಕಡಿಯಲು ವಿನಾಯಿತಿಗಳು ಇವೆಯೇ ; ಇದ್ದಲ್ಲಿ, ಆದೇಶದ ಪ್ರತಿಯನ್ನು ನೀಡುವುದು ;

(ಉ) ವಿನಾಯಿತಿಗಳು ಇಲ್ಲದಿದ್ದಲ್ಲಿ, ವಿನಾಯಿತಿ ನೀಡಲು ಸರ್ಕಾರ ಉದ್ದೇಶಿಸಿದೆಯೇ ; ಯಾವ ಕಾಲಮಿತಿಯಲ್ಲಿ ವಿನಾಯಿತಿ ನೀಡಲಾಗುವುದು?

## ಭೂವ್ಯಾಜ್ಯಗಳ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೨೮೦ (೩೨೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಸೇರಿದಂತೆ ರಾಜ್ಯದ ಹಲವು ನಗರಗಳಲ್ಲಿ ಭೂಮಿ ಮಾರಾಟದ ನಂತರ, ಮಾರಾಟಗಾರನ ವಾರಸುದಾರರಿಂದ ಭೂವ್ಯಾಜ್ಯಗಳು ಎದುರಾಗಿ ಹಲವು ಅಮಾಯಕ ನಾಗರಿಕರು ಸಮಸ್ಯೆಗೆ ಒಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ೨೦೧೩-೧೪ ರಿಂದ ಇಲ್ಲಿಯವರೆಗೆ ಭೂವ್ಯಾಜ್ಯಕ್ಕೆ ಸಂಬಂಧಿಸಿದಂತೆ ದಾಖಲಾದ ಕೇಸುಗಳ ಸಂಖ್ಯೆ ಎಷ್ಟು ; (ವರ್ಷವಾರು, ಜಿಲ್ಲಾವಾರು ವಿವರ ನೀಡುವುದು)

(ಇ) ಭೂಮಿ ಮಾರಾಟದ ನಂತರ, ಮಾರಾಟಗಾರನ ವಾರಸುದಾರರಿಂದ ಯಾವುದೇ ಭೂವ್ಯಾಜ್ಯ ಎದುರಾದರೆ ಮಾರಾಟ ಮಾಡಿದವರ ವಿರುದ್ಧ ಕ್ರಿಮಿನಲ್ ಕೇಸು ದಾಖಲಿಸುವ ಶಾಸನ ಜಾರಿಗೆ ತರಲು ಸರ್ಕಾರ ಉದ್ದೇಶಿಸಿದೆಯೇ ;

(ಈ) ಉದ್ದೇಶಿಸಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಸರ್ಕಾರ ಈ ಬಗ್ಗೆ ಶಾಸನ ರಚಿಸಿ ಜಾರಿಗೆ ತರಲು ಉದ್ದೇಶಿಸಿದೆ ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ನೂತನ ಕ್ರೀಡಾಂಗಣ ನಿರ್ಮಾಣದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೮೧ (೩೫೭) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕ್ರೀಡಾ ಇಲಾಖೆಯಿಂದ ನೂತನ ಕ್ರೀಡಾಂಗಣಗಳನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ರಾಜ್ಯ ಸರ್ಕಾರವು ಕ್ರೀಡಾ ಇಲಾಖೆಯಿಂದ ಯಾವ ಯಾವ ಕ್ರೀಡೆಗಳನ್ನು ಉತ್ತೇಜಿಸುತ್ತಿದೆ ; (ವಿವರ ನೀಡುವುದು)

(ಇ) ಕಳೆದ ೪ ವರ್ಷಗಳಿಂದ ಸರ್ಕಾರ ಉತ್ತೇಜಿಸುತ್ತಿರುವ ಕ್ರೀಡೆಗಳಿಗೆ ಬಿಡುಗಡೆ ಮಾಡಿರುವ ಹಾಗೂ ವೆಚ್ಚ ಮಾಡಿರುವ ಅನುದಾನ ಎಷ್ಟು ? (ವಿವರ ನೀಡುವುದು)

## ಮೈಸೂರು–ಚಾಮರಾಜನಗರ ಜಿಲ್ಲೆಗಳಲ್ಲಿ ಹುಲಿ, ಚಿರತೆ ಮತ್ತು ಕಾಡಾನೆಗಳ ಹಾವಳಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೨ (೩೩೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಒಂದು ವರ್ಷದಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಹುಲಿ, ಚಿರತೆ ಮತ್ತು ಕಾಡಾನೆಗಳ ದಾಳಿಯಿಂದ ಮೃತಪಟ್ಟಿರುವ ಹಾಗೂ ಗಾಯಗೊಂಡಿರುವ ರೈತರು, ಸಾರ್ವಜನಿಕರ ಸಂಖ್ಯೆ ಎಷ್ಟು ; ಇವರಿಗೆ ಇಲಾಖೆಯಿಂದ ಪರಿಹಾರವನ್ನು ನೀಡಲಾಗಿದೆಯೇ ; ವನ್ಯ ಪ್ರಾಣಿಯ ದಾಳಿಯಿಂದ ಸತ್ತವರ ಕುಟುಂಬದವರಿಗೆ ನೀಡುವ ಪರಿಹಾರಧನವನ್ನು ೨೫ ಲಕ್ಷ ರೂ. ಗಳಿಗೆ ಹೆಚ್ಚಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಲ್ಲಿ ಕಾಡಾನೆ ದಾಳಿಯಿಂದ ಉಂಟಾಗಿರುವ ಬೆಳೆ ಹಾನಿ ಪ್ರಕರಣಗಳು ಎಷ್ಟು; ಪ್ರತಿ ಪ್ರಕರಣದಲ್ಲಿ ಆಗಿರುವ ಹಾನಿಯ ಅಂದಾಜು ಮೊತ್ತ, ಪರಿಹಾರ ನೀಡಿದ ಮೊತ್ತ ಎಷ್ಟು ; (ವಿವರ ಒದಗಿಸುವುದು)

(ಇ) ಕಾಡಾನೆ ದಾಳಿಯನ್ನು ತಡೆಯುವಲ್ಲಿ ಸೋಲಾರ್ ಬೇಲಿ, ಕಂದಕ ಇವುಗಳನ್ನು ಇನ್ನೂ ಬಿಗಿಪಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ; ಹಾಗೂ ಕಾಡಿನಲ್ಲಿ ಆನೆಗಳಿಗೆ, ಪ್ರಾಣಿಗಳಿಗೆ ನೀರಿನ ವ್ಯವಸ್ಥೆ ಕಲ್ಪಿಸಲು ಆನೆಗಳಿಗೆ, ಅಗತ್ಯವಾದ ಬಿದಿರು ಮುಂತಾದ ಮೇವನ್ನು ಬೆಳೆಯಲು ಕೈಗೊಂಡಿರುವ ಕ್ರಮಗಳೇನು ; ಇದಕ್ಕಾಗಿ ಕಳೆದ ಮೂರು ವರ್ಷದಲ್ಲಿ ಮಾಡಿರುವ ವೆಚ್ಚ ಎಷ್ಟು ; ಈ ಯೋಜನೆ ಫಲಕಾರಿಯಾಗಿದೆಯೇ ?

## ಚಾಮುಂಡಿ ಬೆಟ್ಟದಲ್ಲಿನ ಚಿರತೆಗಳ ಗಣತಿ ಕುರಿತು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೩ (೩೩೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮುಂಡಿ ಬೆಟ್ಟದ ಅರಣ್ಯದಲ್ಲಿ ಎಷ್ಟು ಚಿರತೆಗಳಿವೆ ಎಂದು ಅಂದಾಜು ಮಾಡಲಾಗಿದೆ ; ಕಳೆದ ಎರಡು ವರ್ಷದಲ್ಲಿ ಈ ಚಿರತೆಗಳು ಮೈಸೂರು ನಗರಕ್ಕೆ ಮತ್ತು ಸುತ್ತಮುತ್ತಲ ಹಳ್ಳಿಗಳಿಗೆ ನುಗ್ಗಿದ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಈ ಚಿರತೆಗಳಿಗೆ ಹಾಗೂ ಇತರೆ ಕಾಡು ಪ್ರಾಣಿಗಳಿಗೆ ಕುಡಿಯುವ ನೀರಿನ ಮತ್ತು ಆಹಾರದ ಅಭಾವ ಉಂಟಾಗಿ ಅವು ನಗರ ಮತ್ತು ಹಳ್ಳಿಗಳತ್ತ ನುಗುತ್ತಿದ್ದು, ಚಾಮುಂಡಿ ಬೆಟ್ಟದ ಮೇಲಿರುವ ದೇವಿಕೆರೆ ಹಾಗೂ ಇತರೆ ಕೆರೆ ಕುಂಟೆಗಳಿಗೆ ನೀರು ತುಂಬಿಸಿ ವನ್ಯ ಪ್ರಾಣಿಗಳಿಗೆ ನೀರಿನ ಆಸರೆ ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

# ಬಿಳಿಗಿರಿ ರಂಗನ ಬೆಟ್ಟದಲ್ಲಿರುವ ದೇವಾಲಯವನ್ನು ಪುನರ್ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೮೪ (೩೩೪) ಮಾನ್ಯ ಮುಜರಾಯಿ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿಳಿಗಿರಿ ರಂಗನ ಬೆಟ್ಟದ ದೇವಾಲಯಗಳ ಪುನರ್ ನಿರ್ಮಾಣ ಕಾರ್ಯ ಯಾವಾಗ ಆರಂಭವಾಯಿತು ; ಇದಕ್ಕೆ ಒದಗಿಸಿದ್ದ ಅನುದಾನ ಎಷ್ಟು ; ಇದುವರೆಗೆ ಪೂರ್ಣವಾಗಿರುವ, ಬಾಕಿ ಉಳಿದಿರುವ ಕಾಮಗಾರಿಗಳು ಯಾವುವು ; ಬಾಕಿ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು ;

(ಆ) ದೇವಾಲಯದ ಪುನರ್ ನಿರ್ಮಾಣ ಕಾರ್ಯದಲ್ಲಿ ಕಳಪೆ ಗುಣಮಟ್ಟದ ಕಾಮಗಾರಿಗಳನ್ನು ಮಾಡಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಯಾವ ಕ್ರಮಗಳನ್ನು ಜರುಗಿಸಲಾಗಿದೆ ; ಇದನ್ನು ಸರಿಪಡಿಸಲು ಯಾವ ಸೂಕ್ತ ಕ್ರಮಗಳನ್ನು ಜರುಗಿಸಲಾಗಿದೆ ;

(ಇ) ಭಕ್ತಾದಿಗಳಿಗೆ ಶೌಚಗೃಹದ ಕೊರತೆ ಇದ್ದು, ಸೂಕ್ತವಾದ ಸ್ಥಳದಲ್ಲಿ ಶೌಚಾಲಯವನ್ನು ನಿರ್ಮಿಸಿ, ನೀರು ಸರಬರಾಜು ಮಾಡಿ, ದಿನವಿಡೀ ಭಕ್ತಾದಿಗಳ ಉಪಯೋಗಕ್ಕೆ ದೊರೆಯುವಂತೆ ವ್ಯವಸ್ಥೆ ಮಾಡುವ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳೇನು ?

## ವಿಜಯಪುರ ಜಿಲ್ಲೆಯ ಜಿಲ್ಲಾ ಕಾರ್ಯಾಲಯಗಳ ಸಂಕೀರ್ಣ ನಿರ್ಮಾಣ ಕುರಿತು

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೮೫ (೩೬೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ನಗರ ಪ್ರದೇಶದ ಮಹಲಬಾಗಾಯತ್ ದಿ.ಸ.ನಂ. ೩೧೩ ಮತ್ತು ೩೧೪ ರಲ್ಲಿ ಜಿಲ್ಲಾ ಕಾರ್ಯಾಲಯಗಳ ಸಂಕೀರ್ಣ ನಿರ್ಮಾಣದ ಪ್ರಸಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಅನುಮೋದನೆ ನೀಡಲಾಗುವುದು ;

(ಇ) ಸದರಿ ಕಾಮಗಾರಿಗೆ ಅನುದಾನದ ಕೊರತೆ ಇದೆಯೇ ;

(ಈ) ಅನುದಾನದ ಕೊರತೆ ಇಲ್ಲದಿದ್ದಲ್ಲಿ, ಸದರಿ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ, ನೀಡಿ ಕೆಲಸ ಪ್ರಾರಂಭಿಸಲು ವಿಳಂಬವಾಗುವುತ್ತಿರುವುದಕ್ಕೆ ಕಾರಣಗಳೇನು ;

(ಉ) ಸದರಿ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು? (ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. ೦75/400 ಪ್ರತಿಗಳು/11–07–2019